ಸಂಪುಟ : 8 ಸಂಚಿಕೆ : 194 ಪುಟ : 4 ಬೆಲೆ : 3.00 ಬುಧವಾರ ಸಪ್ಟೆಂಬರ್ 06, 2023 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 8 Issue : 194 Pages : 4 Price : 3.00 Wednesday September 06, 2023 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ನೀರು ಪೂರೈಕೆ ಮಾಹಿತಿ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಬೆಟಗೇರಿ ಅವಳಿ ನಗರದಲ್ಲಿ ಸೆಪ್ಟೆಂಬರ್ 6 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆಯಾಗಲಿದೆ.

ಸ್ಥಳಗಳ ವಿವರ: ವಾರ್ಡ್ ನಂ. 29ರಲ್ಲಿ ಮಸೂತಿ ಲೈನ್, ಕೆಳಗಿನ ಭಾಗ, ಮೇಲಿನ ಭಾಗ, ವಾರ್ಡ್ ನಂ.13, 12ರಲ್ಲಿ ಸಂಜೀವಿನಿ ಆಸ್ಪತ್ರೆ ರಸ್ತೆ, ಬಾಗಮಾರ ಲೈನ್, ಹಳೇ ಸಾಯಿಬಾಬಾ ಲೈನ್, ಹೊಂಬಳವರ ಲೈನ್, ಶಿವಪೂರ ಆಸ್ಪತ್ರೆ ಹಿಂದೆ, ಕೊಳಚೆಪ್ರದೇಶ ನವಲಿಯವರ ಲೈನ್, 2ನೇ ಕ್ರಾಸ್ ಲೈನ್, ವಸ್ತ್ರದವರ ಲೈನ್, ದ್ಯಾಮನಗೌಡ್ರ ಲೈನ್, ಲೋಕಜ್ಞಾನ, 1ನೇ ಕ್ರಾಸ್ ಕುಲಕರ್ಣಿಯವರ ಲೈನ್, ವಾತ್ಸಲ್ಯ ಆಸ್ಪತ್ರೆ ಲೈನ್, ಮಾಲಿಪಾಟೀಲ ಲೈನ್,

ವಾರ್ಡ್ ನಂ. 15, 16, 17ರಲ್ಲಿ ಶಹಪೂರ ಪೇಟೆ, ಡಿ.ಸಿ.ಮಿಲ್ ರಸ್ತೆ, ಜವಳಗಲ್ಲಿ, ಡೋರ್ ಗಲ್ಲಿ, ಭಾಗ–1,2 ವಾರ್ಡ್ ನಂ. 3 ರಲ್ಲಿ ಮಿಷನ್ ಕಂಪೌಂಡ್ ಭಾಗ–1,2, ಬಣ್ಣದ ನಗರ ಕುಂಬಾರ ಓಣಿ, ಗರಡಿ ಓಣಿ, ರಾಜಾಜಿ ರಸ್ತೆ, ಹುಯಿಲಗೋಳ ರಸ್ತೆ ಭಾಗ–1,2,3, ಮತ್ತು ಮಸೂತಿ ಲೈನ್, ಪಿ.ಎನ್.ಟಿ.ರಸ್ತೆ ಲೈನ್, ವನಕಿ ದವಾಖಾನೆ ಲೈನ್, ಲಕ್ಕುಂಡಿ ದವಾಖಾನೆ ಲೈನ್, ಮೀನದ ಮಾರ್ಕೆಟ್, ಬಳಿಗೇರಿ ಲೈನ್, ನಮಾಜಿಯವರ ಲೈನ್,

ವಾರ್ಡ್ ನಂ. 24ರಲ್ಲಿ ನಾಲವಾಡದವರ ಲೈನ್, ಮದ್ಲಿ ಓಣಿ, ಮಣ್ಣಮ್ಮನವರ ಲೈನ್, ವಾರ್ಡ್ ನಂ. 21ರಲ್ಲಿ ಎಲಿಗಾರ ಪ್ಲಾಟ್, ಲಕ್ಕಶ್ವರ ಲೈನ್, ವಾರ್ಡ್ ನಂ. 22ರಲ್ಲಿ ಗಂಗಿಮಡಿ ತಾಜನಗರ, ಅಮರೇಶ್ವರ ನಗರ, ವಾರ್ಡ್ ನಂ. 6 ಮತ್ತು 10 ರಲ್ಲಿ ಭಜಂತ್ರಿ ಓಣಿ ಅಂಬೇಡ್ಕರ ನಗರ, ಕುಲಕರ್ಣಿ ಓಣಿ, ದಿಬ್ಬದ ಓಣಿ, ಶಿವಾಜಿ ನಗರ ಭಾಗ1,2,3,4.

ತಾಂತ್ರಿಕವಾಗಿ ನೀರು ಪೂರೈಕೆಯಲ್ಲಿ ಒಂದು ವೇಳೆ ಅಡತಡೆಯಾದಲ್ಲಿ ಸಾರ್ವಜನಿಕರು ನಗರಸಭೆಯೊಂದಿಗೆ ಸಹಕರಿಸಬೇಕೆಂದು ಗದಗ ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಾಳೆ ವಿದ್ಯುತ್ ವ್ಯತ್ಯಯ

■ವಿಜಯಸಾಕ್ಷಿ ಸುದ್ದಿ, ಗದಗ

110 ಕೆವ್ಹಿ ಲಕ್ಷ್ಮೇಶ್ವರ ಹಾಗೂ 110 ಕೆವ್ಹಿ ಬೆಳ್ಳಟ್ಟಿ ವಿದ್ಯುತ್ ವಿತರಣಾ ಕೇಂದ್ರಗಳಲ್ಲಿ ತ್ರೈಮಾಸಿಕ ನಿರ್ವಹಣಾ ಕೆಲಸ ಕೈಗೊಳ್ಳುವುದರಿಂದ ಸೆ.7, ಗುರುವಾರ ಮುಂಜಾನೆ 10 ಗಂಟೆಯಿಂದ ಸಾಯಂಕಾಲ 5.30 ಗಂಟೆಯವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗುತ್ತದೆ.

110 ಕೆವ್ಹಿ ಲಕ್ಷ್ಮೇಶ್ವರ ಹಾಗೂ 110 ಕೆವ್ಹಿ ಬೆಳ್ಳಟ್ಟಿ ಉಪಕೇಂದ್ರಗಳಿಂದ ಪೂರೈಕೆಯಾಗುವ 33 ಕೆವ್ಹಿ ಎಮ್ಎಮ್ಸಿಎಲ್ ಗಾಳಿಯಂತ್ರ ಘಟಕ ಮತ್ತು 33 ಕೆವ್ಹಿ ಸೊಮೆಶ್ವರ ಸ್ಪಿನ್ನಿಂಗ ಮಿಲ್, ಸೋಲಾರ್–1, ಸೋಲಾರ್–2 ಹಾಗೂ 110 ಕೆ.ವ್ಹಿ. ಎನಾರಕಾನ, 110 ಕೆ.ವ್ಹಿ. ಆದಿತ್ಯ ಬಿರ್ಲಾ ಸೋಲಾರ್, 33 ಕೆ.ವ್ಹಿ. ಜಾಲವಾಡಗಿ ನೀರು ಸರಬರಾಜು ಉಪಕೇಂದ್ರ, 33 ಕೆ.ವ್ಹಿ. ಸೂರಣಗಿ ಉಪಕೇಂದ್ರ ಮತ್ತು 33 ಕೆ.ವ್ಹಿ. ಹೊಳೆಇಟಗಿ ಉಪಕೇಂದ್ರಗಳಿಂದ ಪೂರೈಸಲ್ಪಡುವ ಎಲ್ಲಾ ನಗರ ಮತ್ತು ಗ್ರಾಮೀಣ ಪ್ರದೇಶಗಳ ಎಲ್ಲಾ 11 ಕೆವ್ಹಿ ವಿತರಣಾ ಮಾರ್ಗಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

ಸಾರ್ವಜನಿಕರು ಪ್ರಕಟಣೆಯನ್ನು ಗಮನಿಸಿ ಕಂಪನಿಯೊಂದಿಗೆ ಸಹಕರಿಸಬೇಕೆಂದು ಹೆಸ್ಕಾಂನ ಕಾರ್ಯ ಮತ್ತು ಪಾಲನೆ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರರು ಪ್ರಕಟಣೆಯಲ್ಲಿ ವಿನಂತಿಸಿದ್ದಾರೆ.

## ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯ ನೋಂದಾಯಿತ ಕಾರ್ಮಿಕರ ಮಕ್ಕಳ ಪೈಕಿ 2023–24ನೇ ಸಾಲಿನಲ್ಲಿ ವ್ಯಾಸಂಗ ಮಾಡುತ್ತಿರುವ ಪ್ರಥಮ ಮತ್ತು ದ್ವಿತೀಯ ಪಿಯುಸಿ ವಿದ್ಯಾರ್ಥಿ, ವಿದ್ಯಾರ್ಥಿನಿಯರಿಗೆ ಉಚಿತ ಲ್ಯಾಪ್‌ಟಾಪ್‌ಗಳನ್ನು ನೀಡಲಾಗುತ್ತಿದೆ.

ಎಪಿಎಂಎಂಸಿ ಪರೀಕ್ಷೆಯಲ್ಲಿ ಹೆಚ್ಚು ಅಂಕಗಳನ್ನು ಪಡೆದಿರುವ ವಿದ್ಯಾರ್ಥಿಗಳನ್ನು ಆಯ್ಕೆ ಮಾಡಲಾಗುವುದು. ಕಾರ್ಮಿಕ ಅಧಿಕಾರಿ ಗದಗ ಉಪವಿಭಾಗ ಇವರ ವ್ಯಾಪ್ತಿಯಲ್ಲಿ ನೋಂದಣಿಯಾಗಿರುವ ಕಾರ್ಮಿಕರು ಮಾರ್ಚ್ 23ರ ಅಂತ್ಯಕ್ಕೂ ಮೊದಲು ನೋಂದಣಿಯಾಗಿರುವ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಮಕ್ಕಳು ಈ ಸೌಲಭ್ಯವನ್ನು ಪಡೆಯಲು ಅರ್ಹರಿರುತ್ತಾರೆ.

ಲ್ಯಾಪ್‌ಟಾಪ್ ಅರ್ಜಿ ನಮೂನೆಯನ್ನು ಕಾರ್ಮಿಕ ಅಧಿಕಾರಿ ಗದಗ ಉಪವಿಭಾಗ,ಇವರ ಕಛೇರಿಯಿಂದ ಅಥವಾ ತಾಲ್ಲೂಕುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಕಾರ್ಮಿಕ ನಿರೀಕ್ಷಕರ ಕಛೇರಿಗಳಿಂದ ಪಡೆದು ಅಗತ್ಯ ದಾಖಲೆಗಳೊಂದಿಗೆ ಅರ್ಜಿ ಸಲ್ಲಿಸಬಹುದಾಗಿದೆ. ಈ ಸೌಲಭ್ಯಕ್ಕೆ ಅರ್ಜಿ ಸಲ್ಲಿಸಲು ಸೆಪ್ಟೆಂಬರ್ 21 ಅಂತಿಮ ದಿನವಾಗಿದೆ.

ಹೆಚ್ಚಿನ ಮಾಹಿತಿಗಾಗಿ ಕಾರ್ಮಿಕ ಅಧಿಕಾರಿಯವರ ಕಚೇರಿ, ಜಿಲ್ಲಾಡಳಿತ ಭವನ 1ನೇ ಮಹಡಿ ಕೊಠಡಿ ಸಂಖ್ಯೆ–124 ಹುಬ್ಬಳ್ಳಿ ರಸ್ತೆ ಗದಗ, ಅಥವಾ ತಾಲೂಕುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಕಾರ್ಮಿಕ ನಿರೀಕ್ಷಕರ ಕಚೇರಿಗಳನ್ನು ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಕಾರ್ಮಿಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರಾಜ್ಯಮಟ್ಟದ ಕುಸ್ತಿಗೆ ಆಯ್ಕೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



ತಾಲೂಕಿನ ಯಲ್ಲಾಪೂರ ಗ್ರಾಮದ ಸರಕಾರಿ ಮಾದರಿ ಪ್ರಾಥಮಿಕ ಶಾಲೆಯಲ್ಲಿ 7ನೇ ವರ್ಗದಲ್ಲಿ ಓದುತ್ತಿರುವ ಲಕ್ಷ್ಮೀ ಭರಮಗೌಡ್ರ 51 ಕೆಜಿ ವಿಭಾಗದ ಕುಸ್ತಿಯಲ್ಲಿ ಜಿಲ್ಲಾ ಮಟ್ಟದಲ್ಲಿ ಉತ್ತಮ ಸಾಧನೆ ಮಾಡಿ, ರಾಜ್ಯಮಟ್ಟದ ಕುಸ್ತಿ ಪಂದ್ಯಾವಳಿಗೆ ಆಯ್ಕೆಯಾಗಿದ್ದಾಳೆ.

ಸೆಪ್ಟೆಂಬರ್ 10, 11 ಮತ್ತು 12ರಂದು ಬಾಗಲಕೋಟೆ ಜಿಲ್ಲೆಯ ಮುಧೋಳದಲ್ಲಿ ನಡೆಯಲಿರುವ ರಾಜ್ಯಮಟ್ಟದ ಕುಸ್ತಿ ಪಂದ್ಯಾವಳಿಯಲ್ಲಿ ಗದಗ ಜಿಲ್ಲೆಯನ್ನು ಪ್ರತಿನಿಧಿಸಲಿದ್ದಾಳೆ. ಶಿರಹಟ್ಟಿ ಮತ್ತು ಲಕ್ಷ್ಮೇಶ್ವರ ತಾಲೂಕುಗಳಲ್ಲಿ ಏಕೈಕ ಮಹಿಳಾ ಕುಸ್ತಿಪಟುವಾಗಿ ಆಯ್ಕೆಯಾಗಿರುವ ಲಕ್ಷ್ಮೀಗೆ ಅನೇಕರು ಶುಭಹಾರೈಸಿದ್ದಾರೆ.

ರಾಜ್ಯಮಟ್ಟದ ಕುಸ್ತಿ ಪಂದ್ಯಾವಳಿಯಲ್ಲಿ ಭಾಗವಹಿಸುತ್ತಿರುವ ಲಕ್ಷ್ಮೀ ಭರಮಗೌಡ್ರ ಅವಳಿಗೆ ಕ್ಷೇತ್ರ ಶಿಕ್ಷಣಾಧಿಕಾರಿ ಜಿ.ಎಂ ಮುಂದಿನಮನಿ, ದೈಹಿಕ ಶಿಕ್ಷಣ ನಿರ್ದೇಶಕ ಎಂ.ಎಂ ಹವಳದ, ಶಾಲೆಯ ಶಿಕ್ಷಕರ ಬಳಗ, ಯಲ್ಲಾಪೂರ ಗ್ರಾಮಸ್ಥರು, ಕ್ರೀಡಾಭಿಮಾನಿಗಳು ಶುಭಹಾರೈಸಿದ್ದಾರೆ.

### ಗದಗ ಜಿಲ್ಲಾ ಮಟ್ಟದ ಶಿಕ್ಷಕರ ದಿನಾಚರಣೆ ಸಮಾರಂಭದಲ್ಲಿ ಸಚಿವ ಎಚ್.ಕೆ.ಪಾಟೀಲ ಕರೆ

# ವಿದ್ಯಾರ್ಥಿಗಳ ವ್ಯಕ್ತಿತ್ವ ನಿರ್ಮಾಣದಲ್ಲಿ ಶಿಕ್ಷಕರ ಪಾತ್ರ ಹಿರಿದು

■ವಿಜಯಸಾಕ್ಷಿ ಸುದ್ದಿ, ಗದಗ




ತಂದೆ ತಾಯಿಗಳು ಮಕ್ಕಳಿಗಾಗಿ ಆಸ್ತಿ ಮಾಡದೇ ಮಕ್ಕಳನ್ನು ಆಸ್ತಿಯನ್ನಾಗಿ ಮಾಡಬೇಕು. ಈ ನಿಟ್ಟಿನಲ್ಲಿ ಮಕ್ಕಳಿಗೆ ಮೌಲ್ಯಯುತ, ಗುಣಮಟ್ಟದ ಶಿಕ್ಷಣ ನೀಡಿ ಅವರ ವ್ಯಕ್ತಿತ್ವ ರೂಪಿಸುವುದರೊಂದಿಗೆ ದೇಶದ ಆಸ್ತಿಯನ್ನಾಗಿಸುವ ಮಹತ್ತರ ಜವಾಬ್ದಾರಿ ಮಕ್ಕಳ ಪಾಲಕರು ಹಾಗೂ ಶಿಕ್ಷಕರ ಮೇಲಿದೆ ಎಂದು ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಅವರು ತಿಳಿಸಿದರು.

ನಗರದ ಅಂಬೇಡ್ಕರ್ ಭವನದಲ್ಲಿ ಮಂಗಳವಾರದಂದು ಗದಗ ಜಿಲ್ಲಾ ಪಂಚಾಯತ್, ಶಾಲಾ ಶಿಕ್ಷಣ ಇಲಾಖೆ ವತಿಯಿಂದ ಡಾ.ಸರ್ವಪಲ್ಲಿ ರಾಧಾಕೃಷ್ಣನ್ ರವರ ಜನ್ಮ ದಿನಾಚರಣೆ ಅಂಗವಾಗಿ ಜರುಗಿದ ಜಿಲ್ಲಾ ಮಟ್ಟದ ಶಿಕ್ಷಕರ ದಿನಾಚರಣೆ ಹಾಗೂ ಜಿಲ್ಲಾ ಪ್ರಶಸ್ತಿ ಪುರಸ್ಕೃತ ಶಿಕ್ಷಕರಿಗೆ ಪ್ರಶಸ್ತಿ ಪ್ರದಾನ ಮತ್ತು ನಿವೃತ್ತ ಶಿಕ್ಷಕರಿಗೆ ಸನ್ಮಾನ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

> ಭಾರತದ ಮೊದಲ ಉಪರಾಷ್ಟ್ರಪತಿ ಭಾರತರತ್ನ ಡಾ.ಸರ್ವಪಲ್ಲಿ ರಾಧಾಕೃಷ್ಣನರವರು ತಮ್ಮ ಜನ್ಮ ದಿನಾಚರಣೆಯನ್ನೇ ಶಿಕ್ಷಕರ ದಿನಾಚರಣೆಯನ್ನಾಗಿ ಮಾಡಲು ಆದೇಶಿಸಿದರು. ಡಾ. ರಾಧಾಕೃಷ್ಣನ್‌ರವರು ಅತ್ಯುತ್ತಮ, ಆದರ್ಶ ಶಿಕ್ಷಕರಾಗಿದ್ದು ಶಿಕ್ಷಣದ ಬಗ್ಗೆ ಪರಿಕಲ್ಪನೆ ಹೇಗಿರಬೇಕು ಎಂಬುದನ್ನು ಜಗತ್ತಿಗೆ ತೋರಿಸಿಕೊಟ್ಟವರು. ಸಾಮಾಜಿಕ ಮತ್ತು ಆಧ್ಯಾತ್ಮಿಕವಾಗಿ ಉನ್ನತ ಸ್ಥಾನವನ್ನು ಪಡೆದಿದ್ದರು. ಅವರ ಸ್ಮರಣೆ ಮಾಡುವುದು ಇಂದಿನ ಅವಶ್ಯಕತೆಯಾಗಿದೆ ಎಂದು ಸಚಿವ ಎಚ್.ಕೆ.ಪಾಟೀಲ ಹೇಳಿದರು.

ದೇಶದಲ್ಲಿ ರಾಷ್ಟ್ರೀಯ ದಿನಗಳಾದ ಆಗಸ್ಟ್ 15, ಜನವರಿ 26 ರ ನಂತರ ಅತ್ಯಂತ ಸೂಕ್ತವಾದ ದಿನಾಚರಣೆಯೆಂದರೆ ಶಿಕ್ಷಕರ ದಿನಾಚರಣೆಯಾಗಿದೆ. ಶಿಕ್ಷಕರ ದಿನಾಚರಣೆಯ ಮೂಲಕ ಶಿಕ್ಷಕರಿಗೆ ಗೌರವ ಸಲ್ಲಿಸಲಾಗುತ್ತದೆ. ಶಿಕ್ಷಕರನ್ನು ಗೌರವಿಸುವುದು ಪ್ರತಿಯೊಬ್ಬರ ಕರ್ತವ್ಯವಾಗಿದೆ ಎಂದ ಸಚಿವ

> ವಿದ್ಯಾರ್ಥಿಗಳ ಮತ್ತು ಶಿಕ್ಷಕರ ನಡುವೆ ಭಾವನಾತ್ಮಕ ಸಂಬಂಧವಿರಬೇಕು. ವಿದ್ಯಾರ್ಥಿಗಳ ವ್ಯಕ್ತಿತ್ವ ನಿರ್ಮಾಣ ಕಾರ್ಯದಲ್ಲಿ ಶಿಕ್ಷಕರ ಪಾತ್ರ ಮಹತ್ವದ್ದಾಗಿದೆ. ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ದೊರಕಿಸುವದಕ್ಕೋಸ್ಕರ ಸರ್ಕಾರವು ಅಲ್ಪಸಂಖ್ಯಾತರ, ಹಿಂದುಳಿದ ಹಾಗೂ ಸಮಾಜ ಕಲ್ಯಾಣ ಇಲಾಖೆಯ ಮೂಲಕ ಹಾಸ್ಟೆಲ್ ಸೌಲಭ್ಯ ಒದಗಿಸಿ ಅಲ್ಲಿ ಗುಣಮಟ್ಟದ ಊಟ, ವಸತಿ ಸೌಲಭ್ಯಗಳನ್ನು ಕಲ್ಪಿಸಲಾಗುತ್ತಿದೆ. ಶಿಕ್ಷಣ ಕ್ಷೇತ್ರದಲ್ಲಿ ಸುಧಾರಣೆ ಕಂಡುಬಂದರೆ ಮಾತ್ರ ಸಮಾಜದಲ್ಲಿ ಸುಧಾರಣೆ ಕಾಣಲು ಸಾಧ್ಯ. ಇತ್ತೀಚಿನ ದಿನಗಳಲ್ಲಿ ತಂತ್ರಜ್ಞಾನ ಬಳಕೆಯೊಂದಿಗೆ ಶಿಕ್ಷಕರ ಗುಣಮಟ್ಟದ ಅಧ್ಯಯನ ಅತ್ಯವಶ್ಯಕವಾಗಿದೆ. ಗದಗ ಜಿಲ್ಲಾ ಕೇಂದ್ರದಲ್ಲಿ ಶಿಕ್ಷಕರಿಗಾಗಿ ಒಂದು ಪ್ರತ್ಯೇಕ ಗ್ರಂಥಾಲಯ ಸ್ಥಾಪನೆ ಕ್ರಮ ಕೈಗೊಳ್ಳಬೇಕು. ಮಕ್ಕಳಲ್ಲಿನ ಮೊಬೈಲ್ ಗೀಳು ಹೋಗಲಾಡಿಸಿ ಅವರಲ್ಲಿ ಮನೋಬಲ ಹೆಚ್ಚಿಸುವ ಕುರಿತು ಕಾರ್ಯಾಗಾರ ಹಮ್ಮಿಕೊಳ್ಳುವ ಕೆಲಸ ಶಿಕ್ಷಕರು ಮಾಡಬೇಕಾಗಿದೆ. ಶಿಕ್ಷಕರಿಗೆ ಯಾವುದೇ ಶೋಷಣೆಯಾಗಬಾರದು ಹಾಗೂ ಶಿಕ್ಷಕರನ್ನು ಗೌರವಿಸುವ ಕೆಲಸವಾಗಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ನುಡಿದರು.

ಎಚ್.ಕೆ.ಪಾಟೀಲ ಅವರು ತಮ್ಮ ವಿದ್ಯಾರ್ಥಿ ಜೀವನದ ಕ್ಷಣಗಳನ್ನು ಮೆಲುಕು ಹಾಕಿದರು.

ಉಪನ್ಯಾಸಕರಾಗಿ ಆಗಮಿಸಿದ ಮುಂಡರಗಿ ಜಗದ್ಗುರು ಅನ್ನದಾನೀಶ್ವರ ಶಿಕ್ಷಣ ಮಹಾವಿದ್ಯಾಲಯದ ಪ್ರಾಚಾರ್ಯ ಪ್ರೊ.ಸಿ.ಎಸ್. ಅರಸನಾಳ ಮಾತನಾಡಿ,. ಡಾ.ರಾಧಾಕೃಷ್ಣನರವರು ಶ್ರೇಷ್ಠ ತತ್ವಜ್ಞಾನಿಯಾಗಿದ್ದರು.

▸▸3ನೇ ಪುಟಕ್ಕೆ

## ಜಿಲ್ಲಾಡಳಿತದಿಂದ ವಿಶ್ವಕರ್ಮ ಜಯಂತಿ ಅರ್ಥಪೂರ್ಣ ಆಚರಣೆಗೆ ನಿರ್ಧಾರ



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಹಯೋಗದಲ್ಲಿ ವಿಶ್ವಕರ್ಮ ಜಯಂತಿಯನ್ನು ಸೆಪ್ಟೆಂಬರ್ 17 ರಂದು ಮಧ್ಯಾಹ್ನ 12 ಗಂಟೆಗೆ ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಅರ್ಥಪೂರ್ಣವಾಗಿ ಆಚರಿಸಲಾಗುವುದು ಎಂದು ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಮುದುಕಮ್ಮನವರ ತಿಳಿಸಿದರು.

ಮಂಗಳವಾರದಂದು ಜಿಲ್ಲಾಡಳಿತ ಭವನದ ಕಾನ್ಫರೆನ್ಸ್ ಹಾಲ್‌ನಲ್ಲಿ ವಿಶ್ವಕರ್ಮ ಜಯಂತಿ ಕುರಿತು ಪೂರ್ವಭಾವಿ ಸಭೆಯ ಅಧ್ಯಕ್ಷತೆಯನ್ನು ವಹಿಸಿ ಅವರು ಮಾತನಾಡಿದರು. ತಾಲೂಕು ಮಟ್ಟದಲ್ಲಿಯೂ ಸಹ ವಿಶ್ವಕರ್ಮ ಜಯಂತಿಯನ್ನು ಆಚರಿಸಲು ಕ್ರಮವಹಿಸಬೇಕೆಂದರು.

ಶಿಷ್ಟಾಚಾರದನ್ವಯ ಕಾರ್ಯಕ್ರಮದ ಆಮಂತ್ರಣ ಪತ್ರಿಕೆ ಮುದ್ರಣ ಮಾಡಿ ಹಂಚಿಕೆ ಮಾಡಬೇಕು, ಅತಿಥಿಗಳನ್ನು ಜಯಂತಿ ಆಚರಣೆಗೆ ಆಹ್ವಾನಿಸಬೇಕು ಎಂದರು. ವಿಶ್ವಕರ್ಮರ ಕುರಿತು ಉಪನ್ಯಾಸಕರ ನೇಮಕ, ವೇದಿಕೆ ವ್ಯವಸ್ಥೆ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ವೀರಯ್ಯಸ್ವಾಮಿ. ಬಿ. ಸರ್ವರಿಗೂ ಸ್ವಾಗತಿಸಿದರು.

ಸಭೆಯಲ್ಲಿ ವಿಶ್ವಕರ್ಮ ಸಮಾಜದ ಜಿಲ್ಲಾ ಅಧ್ಯಕ್ಷ ರಾಜಗೋಪಾಲ ಕಟ್ಲಕೋಪ, ತಾಲೂಕು ಅಧ್ಯಕ್ಷ ಶಿವಪ್ಪ ಕಮ್ಮಾರ, ಸದಸ್ಯರಾದ ದೇವೆಂದ್ರಪ್ಪ ಬಡಿಗೇರ, ಗೋಪಾಲ ಬಡಿಗೇರ, ಎಸ್. ಎಂ. ಕದಡಿ, ಅಶೋಕ ಸುತಾರ ಸೇರಿದಂತೆ ಸಮಾಜದ ಗಣ್ಯರು, ಹಿರಿಯರು ಪಾಲ್ಗೊಂಡಿದ್ದರು.

## ಕಾರ್ಮಿಕರ ಬೇಡಿಕೆಗಳ ಈಡೇರಿಕೆಗೆ ಮನವಿ



■ವಿಜಯಸಾಕ್ಷಿ ಸುದ್ದಿ, ಮುಂಡರಗಿ

ಡಾ. ಬಿ.ಆರ್ ಅಂಬೇಡ್ಕರ್ ನೋಂದಾಯಿತ ಕಟ್ಟಡ ಕಾರ್ಮಿಕರ ಸಂಘದಿಂದ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ, ತಹಸೀಲ್ದಾರ್ ಕಾಚೇರಿ ಅವರಣದಲ್ಲಿ ಕಟ್ಟಡ ಕಾರ್ಮಿಕರು ಪ್ರತಿಭಟನೆ ನಡೆಸಿ, ತಹಸೀಲ್ದಾರರ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿದರು.

ಕಾರ್ಮಿಕ ಮುಖಂಡ ಅಡಿವೆಪ್ಪ ಛಲವಾದಿ ಮಾತನಾಡಿ, ಕಾರ್ಮಿಕ ಮಕ್ಕಳ ಶೈಕ್ಷಣಿಕ ಸಹಾಯಧನ, ಮದುವೆ ಸಹಾಯಧನ, ಅಂತಕ್ರಿಯೆ ಸಹಾಯಧನ, ಆರೋಗ್ಯ ಸಂಜೀವಿನಿ ಯೋಜನೆಯನ್ನು ಕಾರ್ಮಿಕರ ಕುಟುಂಬಕ್ಕೆ ಜಾರಿಗೊಳಿಸಬೇಕು. ಅರ್ಜಿಗಳ ವಿಲೇವಾರಿ ವಿಳಂಬ ತಡೆಗಟ್ಟಿ, ಕಾರ್ಮಿಕ ಇಲಾಖೆಯಲ್ಲಿರುವ ಭ್ರಷ್ಟ ಸಿಬ್ಬಂದಿಗಳ ವಿರುದ್ಧ ಕ್ರಮ ಕೈಗೊಳ್ಳಬೇಕು. ಕಟ್ಟಡ ಕಾರ್ಮಿಕರ ಮನೆ ನಿರ್ಮಾಣಕ್ಕೆ 5 ಲಕ್ಷ ರೂ.ಸಹಾಯಧನ ನೀಡಬೇಕು. ರಾಜ್ಯದ ಕಟ್ಟಡ ಕಾರ್ಮಿಕರ ಕಲ್ಯಾಣ ಮಂಡಳಿಗಳಲ್ಲಿ ಕೇಂದ್ರ ಕಾರ್ಮಿಕ ಸಂಘಗಳಿಗೆ ಪ್ರಾತಿನಿಧ್ಯ ನೀಡಬೇಕು. ಸಹಾಯಕ ಕಾರ್ಮಿಕ ಆಯುಕ್ತರ ಕಚೇರಿಯಲ್ಲಿ ನೋಂದಣಿಯಾದ ಸಂಘಗಳಿಗೆ ಮಾತ್ರ ಕಾರ್ಮಿಕರ ಹೊಸ ಹಾಗೂ ನವೀಕರಣ ಕಾರ್ಡ್ ಮಾಡಿಸುವುದಕ್ಕೆ ಉದ್ಯೋಗ ಪ್ರಮಾಣಪತ್ರ ನೀಡಲು ಅವಕಾಶ ಮಾಡಿಕೊಡಬೇಕು ಇವೇ ಮುಂತಾದ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿದರು.

ಕಾರ್ಮಿಕರಾದ ಪ್ರಕಾಶ್ ದೊಡ್ಡಮನಿ, ಎಲ್ಲಪ್ಪ ಭಜಂತ್ರಿ, ಹುಚ್ಚಪ್ಪ ಭಜಂತ್ರಿ, ಹನುಮಂತಪ್ಪ ಭಜಂತ್ರಿ, ನಾಗರಾಜ್ ರಾಮನಹಳ್ಳಿ, ಹುಲುಗಪ್ಪ ಬಂಡಿ, ಇಸಾಕಲಿ ಬಿಂಕದಕಟ್ಟಿ, ಹಸನ್ ಅಳವಂಡಿ, ಅರ್ಜುನ್ ಗುಡಿ, ಮೈಬುಸಾಬ್ ತಂಬ್ರಹಳ್ಳಿ, ಇಮಾಮ್ ಸಾಬ್ ಮುಲ್ಲಾ, ಎಲ್ಲಪ್ಪ ಕಂಬಳಿ, ದುರ್ಗಪ್ಪ ಬಂಡಿ, ವಡ್ಡರ್ ಶರೀಫ್ ಸಾಬ್ ಹಣಗಿ, ನಿಸರ್ಗ ಕಟ್ಟಡ ಕಾರ್ಮಿಕ ಸಂಘದ ಅಧ್ಯಕ್ಷ ಬಸಯ್ಯ ಡಂಬಳಮಠ, ಶಿವಣ್ಣ ಆರವಂಟಿಗಿ, ನೀಲಪ್ಪ ಮೆಣಸಿ, ಮಂಜುನಾಥ್ ಗದಗಿನ, ಸಿದ್ದಲಿಂಗಪ್ಪ ಪವಾಡಿ, ಶಿವಾನಂದ ಎನಿಗರ್, ಕೋಟೇಶ್ ಕಲ್ಲಳ್ಳಿ, ವೀರೇಶ್ ಮಾಂಡ್ರೆ, ಹನುಮಂತ ಪೂಜಾರ್, ಮಂಜುಳಾ ವಾರದ, ನೀಲಮ್ಮ ಹಿರೇಮಠ, ಹೊಲಗೆವ್ವ ಕಂಬಳಿ ಮುಂತಾದವರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

### ಮಳೆಯಿಂದ ಹಾನಿಗೊಳಗಾದ ಸ್ಥಳಗಳಿಗೆ ಭೇಟಿ ನೀಡಿದ ಶಾಸಕ ಜಿ.ಎಸ್ ಪಾಟೀಲ

## ಅಧಿಕಾರಿಗಳು ಸಮಸ್ಯೆಗಳನ್ನು ಬಗೆಹರಿಸುವ ಕೆಲಸ ಮಾಡಿ

■ವಿಜಯಸಾಕ್ಷಿ ಸುದ್ದಿ, ರೋಣ

ಕಳೆದ ಎರಡು ದಿನಗಳಿಂದ ಸುರಿದ ಭಾರೀ ಮಳೆಗೆ ಬಸರಕೋಡ ಗ್ರಾಮದಲ್ಲಿ ವ್ಯಾಪಕ ಹಾನಿ ಸಂಭವಿಸಿದ್ದು, ಸ್ಥಳಕ್ಕೆ ಭೇಟಿ ನೀಡಿ ಹಾನಿ ಪ್ರಮಾಣವನ್ನು ವೀಕ್ಷಿಸಿದ ಶಾಸಕ ಜಿ.ಎಸ್ ಪಾಟೀಲ ಗ್ರಾಮಸ್ಥರಿಗೆ ಧೈರ್ಯ ತುಂಬುವ ಮೂಲಕ ಸೂಕ್ತ ಪರಿಹಾರ ವಿತರಣೆಗೆ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು.

> ತಹಸೀಲ್ದಾರ ವಾಣಿ ಉಂಕಿಯವರೊಂದಿಗೆ ದೂರವಾಣಿಯಲ್ಲಿ ಮಾತನಾಡಿದ ಶಾಸಕ ಜಿ.ಎಸ್ ಪಾಟೀಲ, 'ನೋಡಮ್ಮಾ, ಇಲ್ಲಿನ ಸಮಸ್ಯೆಗಳನ್ನು ಬಗೆಹರಿಸುವ ಕೆಲಸ ಮಾಡಬೇಕು. ತಾಪಂ ಇಒ ಬಸವಣ್ಣ ಕುಂತಾಂಗ ಕುಂತಾರ. ನೀವು ಅವರ ಮೇಲೆ ಹಾಕಿದ್ರೆ ಹೇಗೆ? ಹಕ್ಕುಪತ್ರ ವಿತರಣೆ ಮಾಡಿ, ನೊಂದವರ ಬಾಳಿಗೆ ಬೆಳಕು ಚೆಲ್ಲಿ ಎಂದರು.

ಮಂಗಳವಾರ ಸಂಜೆ ಗ್ರಾಮಕ್ಕೆ ಬೇಟಿ ನೀಡಿದ ಶಾಸಕರು, ಹಾನಿಗೊಳಗಾದ ಸ್ಥಳಕ್ಕೆ ತೆರಳಿ ಪರಿಶೀಲನೆ ನಡೆಸಿದರು. ಈ ಸಂಧರ್ಭದಲ್ಲಿ ಪಿಡಿಒ, ಗ್ರಾಮಾಡಳಿತಾಧಿಕಾರಿಗಳ ಬಳಿ ಹೆಚ್ಚಿನ ವಿವರವನ್ನು ಪಡೆದುಕೊಂಡು, ಶಿಘ್ರ ಹಾನಿ ವರದಿಯನ್ನು ತಯಾರಿಸಿ ಇಲಾಖೆಗೆ ನೀಡುವಂತೆ ಸೂಚಿಸಿದರು. ಹಾನಿಗೊಳಗಾದ

▸▸3ನೇ ಪುಟಕ್ಕೆ



## ಅವಧಿ ವಿಸ್ತರಣೆ

■ವಿಜಯಸಾಕ್ಷಿ ಸುದ್ದಿ, ಗದಗ

ಪ್ರಸ್ತುತ ಸಾಲಿನ ಅರ್ಹ ವಿಕಲಚೇತನರ 08 ಫಲಾನುಭವಿ ಆಧಾರಿತ ಯೋಜನೆಗಳ ಸೌಲಭ್ಯ ಪಡೆಯಲು ಸೇವಾ ಸಿಂಧು ಮೂಲಕ ಅರ್ಜಿಯನ್ನು ಆಹ್ವಾನಿಸಲಾಗಿದೆ. ಆನ್‌ಲೈನ್ ಅರ್ಜಿ ಸಲ್ಲಿಸುವ ಅವಧಿಯನ್ನು ಸೆಪ್ಟೆಂಬರ 30 ರವರೆಗೆ ವಿಸ್ತರಿಸಲಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಂಗವಿಕಲರ ಕಲ್ಯಾಣಧಿಕಾರಿಗಳ ಕಾರ್ಯಾಲಯ ಕೊಠಡಿ ಸಂಖ್ಯೆ29 ನೆಲಮಹಡಿ ಜಿಲ್ಲಾ ಆಡಳಿತ ಭವನ, ಗದಗ –582101 ದೂರವಾಣಿ ಸಂಖ್ಯೆ 08372–220419 ಗೆ ಸಂಪರ್ಕಿಸಬಹುದಾಗಿದೆ.

## ಕಾವೇರಿ ನೀರನ್ನು ತಮಿಳುನಾಡಿಗೆ ಹರಿಸದಿರಲು ಮನವಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



ತಮಿಳುನಾಡಿಗೆ ಬಿಡುತ್ತಿರುವ ಕಾವೇರಿ ನೀರನ್ನು ನಿಲ್ಲಿಸುವಂತೆ ಆಗ್ರಹಿಸಿ ಕರ್ನಾಟಕ ರಕ್ಷಣಾ ವೇದಿಕೆ ಸ್ವಾಭಿಮಾನಿ ಬಳಗದ ವತಿಯಿಂದ ಪಟ್ಟಣದಲ್ಲಿ ಮಂಗಳವಾರ ತಹಸೀಲ್ದಾರ ಕೆ.ಆನಂದಶೀಲ್ ಅವರ ಮೂಲಕ ಸರಕಾರಕ್ಕೆ ಮನವಿ ಅರ್ಪಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಕರವೇ ಸ್ವಾಭಿಮಾನಿ ಬಣದ ಪ್ರಮುಖರು, ರಾಜ್ಯದಲ್ಲಿ ದಿನದಿಂದ ದಿನಕ್ಕೆ ಮಳೆ ಪ್ರಮಾಣ ಕಡಿಮೆಯಾಗುತ್ತಿದ್ದು, ಇದರಿಂದ ಕಾವೇರಿ ಜಲಾನಯನ ಪ್ರದೇಶದಲ್ಲಿ ನೀರಿನ ಮಟ್ಟವೂ ಕುಸಿತವಾಗಿದೆ. ಆದರೂ ಸಹ ಕಾವೇರಿ ನೀರನ್ನು ತಮಿಳುನಾಡಿಗೆ ಬಿಡುತ್ತಿರುವದು ರಾಜ್ಯದ ಜನತೆಗೆ ಮಾಡುತ್ತಿರುವ ಅನ್ಯಾಯವಾಗಿದೆ. ರಾಜ್ಯದ ಜನರಿಗೆ ಕುಡಿಯಲು ನೀರಿಲ್ಲ, ರೈತರಿಗೆ ಕೃಷಿ ಕಾರ್ಯಕ್ಕೆ ನೀರು ಇಲ್ಲದಂತಹ ಪರಿಸ್ಥಿತಿಯಲ್ಲೂ ತಮಿಳುನಾಡಿಗೆ ನೀರನ್ನು ಇಲ್ಲಿಯವರೆಗೂ ಬಿಟ್ಟಿದ್ದೀರಿ. ಇನ್ನು ಮುಂದೆ ಯಾವುದೇ ಕಾರಣಕ್ಕೂ ತಮಿಳುನಾಡಿಗೆ ನೀರು ಹರಿಸಬಾರದು ಎಂದು ಆಗ್ರಹಿಸಿದರು.

ಬಳಗದ ತಾಲೂಕಾಧ್ಯಕ್ಷ ರವಿ ಲಿಂಗಶೆಟ್ಟಿ, ನಗರ ಘಟಕದ ಅಧ್ಯಕ್ಷ ಮಂಜುನಾಥ ಚಂದರಗಿ, ಸಾವಿತ್ರಿ ಕುರಿ, ಪುಷ್ಪ ಅಣ್ಣಿಗೇರಿ, ಶಿವಣ್ಣ, ಗಿಡಿಬಿಡಿ, ಸಿ.ಆರ್ ಚಾವಡಿ, ಮಾಂತೇಶ ಖಂಡೋಜಿ, ಲಕ್ಷ್ಮೀ ಕಲಿವಾಳ, ರಾಜು ಹಾದಿಮನಿ, ರಾಜೇಶ್ವರಿ ಮುಂಗೋಡಿ, ಬಸವರಾಜ ಗಿಡಿಬಿಡಿ(ದೇಸಾಯಿ), ಪ್ರವೀಣ ಕೊತಲಚಿಂತಿ, ಭೀಮಣ್ಣ ಶಿರ್ಶೆಪನವರ, ಪ್ರದೀಶ ಜನಿವಾರದ, ಮಲ್ಲಿಕಾರ್ಜುನ ಹಡಪದ, ನೂರಹದ ಲೋಹಾರ, ಮಲ್ಲಿಕಾರ್ಜುನ ಉಣಕಲ್ಲ, ಪ್ರವೀಣ ತಡಸದ, ಶನಿಮಂತ ಪಡಗೇರಿ, ಮಂಜಯ್ಯ ಕಲಕೇರಿಮಠ, ಶಿವನಗೌಡ ಹುಲೆಪ್ಪಗೌಡ, ಮಂಜುನಾಥ ಲಿಂಗಶೆಟ್ಟಿ, ಅನಂದ ಅಮರಶೆಟ್ಟಿ, ಜಮಾಲಸಾಬ ನದಾಪ, ಪ್ರಕಾಶ ಪಾಸ್ತೆ, ಈರಯ್ಯ ಹಿರೇಮಠ ಸೇರಿದಂತೆ ಅನೇಕರಿದ್ದರು.

## ಹಾಕಿ ಆಡಿ ಗಮನ ಸೆಳೆದ ರಾಜ್ಯದ ಪ್ರಭಾವಿ ನಾಯಕರು



■ ವಿಜಯಸಾಕ್ಷಿ ಸುದ್ದಿ, ಗದಗ

ಇತ್ತೀಚೆಗೆ ನಗರದಲ್ಲಿ ನಡೆದ ಮಹಾತ್ಮಾಗಾಂಧಿ ಆಸ್ಟ್ರೋ ಟರ್ಫ್ ಹಾಕಿ ಕ್ರೀಡಾಂಗಣದ ಉದ್ಘಾಟನಾ ಸಮಾರಂಭದಲ್ಲಿ ರಾಜ್ಯದ ರಾಜಕೀಯ ರಂಗದ ಇಬ್ಬರು ಘಟಾನುಘಟಿ ಮತ್ತು ಪ್ರಭಾವಿ ನಾಯಕರು ಹಾಕಿ ಸ್ಟಿಕ್ ಹಿಡಿದು ಹಾಕಿ ಆಡಿದ್ದು ನೆರೆದವರೆಲ್ಲರ ಗಮನ ಸೆಳೆಯಿತು.

ಸಭಾಪತಿ ಬಸವರಾಜ ಹೊರಟ್ಟಿ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ ಪಾಟೀಲರಿಬ್ಬರೂ ಹಾಕಿ ಸ್ಟಿಕ್ ಹಿಡಿದು ಮೈದಾನಕ್ಕೆ ಇಳಿದಾಗ, ನೆರೆದವರೆಲ್ಲರೂ ಅಚ್ಚರಿಗೊಳಗಾದರು. ಹಾಕಿ ಕ್ರೀಡಾಂಗಣ ಉದ್ಘಾಟಿಸಿದ ಸಚಿವ ಎಚ್.ಸಿ ಮಹಾದೇವಪ್ಪ ಮತ್ತು ಸಚಿವ ಬಿ.ನಾಗೇಂದ್ರ ಅವರೂ ಸಹ ಬೆರಗಾಗಿ ನಿಂತು ಇವರ ಆಟವನ್ನು ವೀಕ್ಷಿಸಿದರು. ಆಟದ ನಂತರ ಇಬ್ಬರೂ ನಾಯಕರು, ಹಾಕಿ ಕ್ರೀಡೆಯಲ್ಲಿ ಘನತೆ ತಂದುಕೊಟ್ಟು ರಾಜ್ಯ, ರಾಷ್ಟ್ರ, ಅಂತಾರಾಷ್ಟ್ರೀಯ ಮಟ್ಟದಲ್ಲಿ ಗದಗಿನ ಹೆಸರನ್ನು ಚಿರಸ್ಥಾಯಿಗೊಳಿಸಿದ 12 ಜನ ಆಟಗಾರರನ್ನು ಆತ್ಮೀಯವಾಗಿ ಸನ್ಮಾನಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಸಭಾಪತಿ ಬಸವರಾಜ ಹೊರಟ್ಟಿ, ಸಚಿವ ಪಾಟೀಲರು ಮೂಲತಃ ಕ್ರೀಡಾಪಟುವಾಗಿದ್ದಾರೆ. ಹೀಗಾಗಿ ಅವರಿಗೆ ಆಟಗಳೆಂದರೆ ಪಂಚಪ್ರಾಣ. ಅದಕ್ಕೆಂದೇ ಅವರು ಗದಗನಲ್ಲಿ ಇಂತಹ ಸುಸಜ್ಜಿತ ಹಾಕಿ ಕ್ರೀಡಾಂಗಣವನ್ನು ಒದಗಿಸಿಕೊಟ್ಟಿದ್ದಾರೆ. ಡಾ. ಎಚ್.ಕೆ ಪಾಟೀಲರು ಏನೇ ಕೆಲಸ ಮಾಡಿದರೂ ಕಾಳಜಿಯಿಂದ ಮಾಡುತ್ತಾರೆ ಎನ್ನುವುದಕ್ಕೆ ಈ ಕ್ರೀಡಾಂಗಣ ಮತ್ತು ಈಜುಕೊಳವೇ ಸಾಕ್ಷಿ ಎಂದರು.

ಸಚಿವ ಎಚ್.ಕೆ ಪಾಟೀಲ ಮಾತನಾಡಿ, ಉತ್ತರ ಕರ್ನಾಟಕದ ಅಭಿವೃದ್ಧಿ ವಿಷಯ ಬಂದಾಗ ಪಕ್ಷಭೇದ ಮರೆತು ನಾವು ಒಂದುಗೂಡಿ ಧ್ವನಿ ಎತ್ತುತ್ತೇವೆ. ನಾವು ಕರೆದಾಗಲೆಲ್ಲ ಗದಗಕ್ಕೆ ಬಂದು ನಮ್ಮ ಕಾರ್ಯಗಳನ್ನು ನೋಡಿ ಬೆನ್ನು ತಟ್ಟುತ್ತ, ಮಾರ್ಗದರ್ಶನ ಮಾಡುತ್ತಿರುವ ಸಭಾಪತಿ ಹೊರಟ್ಟಿಯವರನ್ನು ನಾನು ಸಮಸ್ತ ಗದಗ ಜಿಲ್ಲೆಯ ಜನತೆಯ ಪರವಾಗಿ ಹಾರ್ದಿಕವಾಗಿ ಅಭಿನಂದಿಸುತ್ತೇನೆ ಎಂದರು.

## ಬಸವಾದಿ ಶರಣರ ಮಾರ್ಗದಲ್ಲಿ ನಡೆದರೆ ಬದುಕು ಸುಂದರ



■ ವಿಜಯಸಾಕ್ಷಿ ಸುದ್ದಿ, ಗದಗ

ಬಸವಾದಿ ಶರಣರ ವಿಚಾರಧಾರೆಗಳು ಮತ್ತು ವಚನ ಚಿಂತನೆಗಳನ್ನು ಪ್ರತಿಯೊಬ್ಬರೂ ಜೀವನದಲ್ಲಿ ಅಳವಡಿಸಿಕೊಂಡು ಮುನ್ನಡೆಯಬೇಕು. ಬಸವಾದಿ ಶರಣರ ಮಾರ್ಗದಲ್ಲಿ ನಾವೆಲ್ಲರೂ ನಡೆದರೆ ಈ ಬದುಕು ಹಸನಾಗುತ್ತದೆ ಎಂದು ಜಯಲಕ್ಷ್ಮೀ ಲಾಲಗೊಂಡ ಅಭಿಪ್ರಾಯಪಟ್ಟರು.

ಅವರು ಗಂಗಿಮಡಿ ರಸ್ತೆಯ ಶರಣೆ ಸುಮಿತ್ರಾ ದೊಡ್ಡಮನಿ ರವರ ನಿವಾಸದಲ್ಲಿ ನಡೆದ ವಚನ ಶ್ರಾವಣ ಕಾರ್ಯಕ್ರಮದಲ್ಲಿ ಉಪನ್ಯಾಸ ನೀಡಿದರು. ಸಮಾಜದಲ್ಲಿ ಮೂಢನಂಬಿಕೆ, ಕಂದಾಚಾರಗಳನ್ನು ಬಿಟ್ಟು ನಿಜವಾದ ದಾರಿಯಲ್ಲಿ ನಡೆಯೋಣ. ಬಸವಾದಿ ಶರಣರ ಆಚಾರ-ವಿಚಾರಗಳನ್ನು ಗೌರವಿಸೋಣ ಎಂದು ನುಡಿದರು.

ಶರಣ ಪ್ರಕಾಶ್ ಅಸುಂಡಿ, ಶಿವಣ್ಣ ಮುಗದ ಅವರು ಶರಣ ಹಾವಿನಾಳ ಕಲ್ಲಯ್ಯನವರು ಬರೆದ ವಚನವನ್ನು ಚಿಂತನೆ ಮಾಡಿದರು. ಸಭೆಯಲ್ಲಿ ದೊಡ್ಡಮನಿ ಪರಿವಾರದವರು, ಡಿ.ಎಸ್ ದುರ್ಗಣ್ಣವರ, ಬಿ.ಬಿ ಪಾಟೀಲ, ಶಾರದಾ ಬೊಮ್ಮಸಾಗರ, ಶೇಖಪ್ಪ ಹನುಮನಾಳ, ಹನುಮಂತ ಪ್ರಾತೋಟ ಮಹಾಲಿಂಗಪೂರ, ಸಿ.ಆರ್ ಗಡಾದ, ಗಂಗಮ್ಮ ಹೂಗಾರ, ಸುಮಿತ್ರ ದೊಡ್ಡಮನಿ, ನಾಗರತ್ನ ಅಸುಂಡಿ, ಪ್ರಕಾಶ್ ಅಸುಂಡಿ, ಕೆ.ವಿ ಗೋಣಿ, ಶಿವಣ್ಣ ಮುಗದ, ಎಸ್.ಎನ್ ಹಕಾರಿ, ಶಾರದಾ ಬೊಮ್ಮಸಾಗರ, ರೇಣುಕಾ ಪಾಟೀಲ, ಗುರುನಾಥ ಹೊಸಮನಿ, ಸಹನಾ ಆಲತಗಿ, ಗಿರಿಜಾ ಹಿರೇಮಠ, ಶೋಭಾ ಕೋರಿ, ಶೋಭಾ ದುರ್ಗಣ್ಣವರ, ಲಕ್ಷ್ಮೀದೇವಿ ಬುಳ್ಳಾ, ಪ್ರೇಮಾ ಪೂಜಾರ ಮುಂತಾದವರು ಪಾಲ್ಗೊಂಡಿದ್ದರು.

ದೊಡ್ಡಮನಿ ಕುಟುಂಬದವರು ಸ್ವಾಗತಿಸಿದರು. ಗಂಗಮ್ಮ ಹೂಗಾರ ನಿರೂಪಿಸಿದರು.

### ಪುರಾಣ ಪ್ರವಚನ, ಧರ್ಮ ಸಮಾರಂಭದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು

## ಅಧಿಕಾರದ ಅಂತಸ್ತು ಬೆಳೆದಂತೆ ನೀತಿಯ ಅಂತಸ್ತು ಬೆಳೆಯಬೇಕು

■ ವಿಜಯಸಾಕ್ಷಿ ಸುದ್ದಿ, ಬಾಳೆಹೊನ್ನೂರು

ಮನುಷ್ಯ ಜೀವನದಲ್ಲಿ ಸುಖ-ಸಮೃದ್ಧಿಗಳು ಬೆಳೆದಂತೆ ಸತ್ಕೃತಿ-ಸಂಸ್ಕೃತಿಗಳು ಬೆಳೆಯಬೇಕು. ವಿದ್ಯಾ-ಬುದ್ಧಿ ಬೆಳೆದಂತೆ ಹೃದಯ ವಿಕಾಸಗೊಳ್ಳಬೇಕು. ಅಧಿಕಾರದ ಅಂತಸ್ತು ಏರಿದಂತೆ ನೀತಿಯ ಅಂತಸ್ತು ಬೆಳೆಯುವ ಅವಶ್ಯಕತೆಯಿದೆ ಎಂದು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಶ್ರಾವಣ ಮಾಸದ 3ನೇ ಸೋಮವಾರ ಶ್ರೀ ಜಗದ್ಗುರು ರಂಭಾಪುರಿ ಪೀಠದಲ್ಲಿ ಜರುಗಿದ ಶ್ರೀ ಜಗದ್ಗುರು ರೇಣುಕ ವಿಜಯ ಪುರಾಣ ಪ್ರವಚನ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಮನುಷ್ಯ ತನ್ನ ಜೀವನವನ್ನು ಸ್ವರ್ಗ ಮತ್ತು ನರಕ ಮಾಡಿಕೊಳ್ಳಲು ಅವನ ಮನಸ್ಸೇ ಮೂಲ ಕಾರಣ. ಮನಸ್ಸು ದುರ್ಬಲ ಮಾಡಿಕೊಳ್ಳದೇ ಛಲದಿಂದ ಸಮತೋಲನದಲ್ಲಿ ಹೆಜ್ಜೆ ಹಾಕಬೇಕಾಗುತ್ತದೆ.



ಮನುಷ್ಯ ಜೀವನದಲ್ಲಿ ಹಲವಾರು ಸಮಸ್ಯೆ, ಸವಾಲುಗಳನ್ನು ಎದುರಿಸಿ ಬಾಳಬೇಕಾಗುತ್ತದೆ. ಆತ್ಮ ಬಲ, ಗುರು ಕಾರುಣ್ಯ ಮತ್ತು ನಿರಂತರ ಸಾಧನೆಯಿಂದ ಜೀವನದಲ್ಲಿ ಶ್ರೇಯಸ್ಸು ಕಾಣಲು ಸಾಧ್ಯವಾಗುತ್ತದೆ. ಯಾವುದೇ ಧರ್ಮದ ರಹಸ್ಯ ಅಡಗಿರುವುದು ತತ್ವ ಸಿದ್ಧಾಂತಗಳಲ್ಲಿ ಅಲ್ಲ. ಅದರಲ್ಲಿರುವ ವಿಚಾರಗಳನ್ನು ತಿಳಿದು ಅದರಂತೆ ನಡೆದಾಗಲೇ ಜೀವನ ಉನ್ನತಿಗೇರಲು ಸಾಧ್ಯವಾಗುತ್ತದೆ. ಶ್ರೀ ಜಗದ್ಗುರು ರೇಣುಕಾಚಾರ್ಯರು ಮೌಲ್ಯಾಧಾರಿತ ತತ್ವ ಸಿದ್ಧಾಂತಗಳನ್ನು ಬೋಧಿಸುವುದರ ಮೂಲಕ ಬದುಕಿಗೆ ನೆಮ್ಮದಿ ಮತ್ತು ಬಲ ತಂದು ಕೊಟ್ಟಿದ್ದಾರೆ. ಅವರ ಧಾರ್ಮಿಕ ಮತ್ತು ಸಾಮಾಜಿಕ ಚಿಂತನಗಳು ಬದುಕಿ ಬಾಳುವ ಜನಾಂಗಕ್ಕೆ ದಾರಿ ದೀಪ ಎಂದರು.

> ಪುರಾಣ ಪ್ರವಚನ ಮಾಡಿದ ಮಾದನ ಹಿಪ್ಪರಗಿ ಹಿರೇಮಠದ ಶಾಂತವೀರ ಶಿವಾಚಾರ್ಯ ಸ್ವಾಮಿಗಳು, ಜೀವನ ಶ್ರೇಯಸ್ಸಿಗೆ ಧರ್ಮವೇ ಮೂಲ. ಅರಿವು, ಆದರ್ಶಗಳ ದಾರಿಯಲ್ಲಿ ಮುನ್ನಡೆಯಲು ಗುರು ಕಾರುಣ್ಯ ಅವಶ್ಯಕ. ಶಿವ ಪಥವನರಿಯಲು ಮೊದಲು ಗುರು ಪಥ ಬಹಳ ಮುಖ್ಯ. ಶ್ರೀ ಜಗದ್ಗುರು ರೇಣುಕಾಚಾರ್ಯರ ಜನ ಹಿತಾತ್ಮಕ ಸಾಧನೆ ಬೋಧನೆಗಳು ಉಜ್ವಲ ಬದುಕಿಗೆ ಕಾರಣವಾಗಿವೆ ಎಂದರು.

ಶ್ರಾವಣ ಪವಿತ್ರ ಧರ್ಮ ಸಮಾರಂಭದಲ್ಲಿ ಚನ್ನಗಿರಿ ಹಿರೇಮಠದ ಕೇದಾರ ಶಿವಶಾಂತವೀರ ಶಿವಾಚಾರ್ಯರು, ಕೂಡ್ಲಿಗಿ ತಾಲೂಕ ಅಲೂರು ಹಿರೇಮಠದ ಸಿದ್ಧಲಿಂಗ ಸ್ವಾಮಿಗಳು, ಉಟಗಿ ಶಿವಪ್ರಸಾದ ದೇವರು, ರೇವತ್‌ಗಾವ್ ವಿಶ್ವನಾಥ ದೇವರು, ಬಬಲಾದಿ ದಾನಯ್ಯ ದೇವರು ಪಾಲ್ಗೊಂಡು ನುಡಿನಮನ ಸಲ್ಲಿಸಿದರು.

ಲಕ್ಷ್ಮೇಶ್ವರದ ಆನಂದ ಗಡ್ಡದ್ದೇವರಮಠ, ವಿರೂಪಾಕ್ಷಯ್ಯ ಅಗಡಿ, ಬಸವಕಲ್ಯಾಣದ ಪ್ರೊ. ದಯಾನಂದ ಶೀಲವಂತರ, ಬೀದರ ಮಂಜುನಾಥ, ಬೀರೂರು ಗಂಗಾಧರ, ಸೊರಬ ತಾಲೂಕಿನ ಸದ್ಭಕ್ತ ಮಂಡಳಿ ಮೊದಲ್ಗೊಂಡು ಹಲವಾರು ಗಣ್ಯರು ಪಾಲ್ಗೊಂಡು ಶ್ರೀ ರಂಭಾಪುರಿ ಜಗದ್ಗುರುಗಳಿಂದ ಗುರುರಕ್ಷೆ ಸ್ವೀಕರಿಸಿದರು.

ಶ್ರೀ ಜಗದ್ಗುರು ರೇಣುಕಾಚಾರ್ಯ ಗುರುಕುಲ ಸಾಧಕರಿಂದ ವೇದಘೋಷ, ಗಂಗಾಧರ ಹಿರೇಮಠ ಇವರಿಂದ ಭಕ್ತಿ ಗೀತೆ ಜರುಗಿತು. ಶಿಕ್ಷಕ ವೀರೇಶ ಕುಲಕರ್ಣಿ ನಿರೂಪಿಸಿದರು.

ಪ್ರಾತಃಕಾಲ ಲೋಕ ಕಲ್ಯಾಣಕ್ಕಾಗಿ ಶ್ರೀ ರಂಭಾಪುರಿ ಜಗದ್ಗುರುಗಳು ಇಷ್ಟಲಿಂಗ ಮಹಾಪೂಜಾ ನೆರವೇರಿಸಿ ಭಕ್ತ ಸಮುದಾಯಕ್ಕೆ ಶುಭ ಹಾರೈಸಿದರು. ಶ್ರೀ ಪೀಠದ ಎಲ್ಲ ದೈವಗಳಿಗೆ ವಿಶೇಷ ಪೂಜೆ ಹಾಗೂ ಹೂವಿನ ಅಲಂಕಾರ ನಡೆಯಿತು.

## ಕಷ್ಟಗಳಿಗೆ ಬಾಗದೇ ಮುನ್ನುಗ್ಗಿ: ಪ್ರೊ. ದೇಶಪಾಂಡೆ



■ ವಿಜಯಸಾಕ್ಷಿ ಸುದ್ದಿ, ಗದಗ

ವಿದ್ಯಾರ್ಥಿಗಳಲ್ಲಿ ಜ್ಞಾನದ ಹಸಿವು ಹೆಚ್ಚಾದಾಗ ಮಾತ್ರ ಸಾಧನೆಯತ್ತ ತೆರಳಲು ಸಾಧ್ಯವಾಗುತ್ತದೆ. ಪ್ರತಿಯೊಬ್ಬರೂ ಶ್ರದ್ಧೆ, ಪ್ರಾಮಾಣಿಕತೆ, ನಿಷ್ಠೆಯನ್ನು ಮೈಗೂಡಿಕೊಂಡಾಗ ಸಶಕ್ತ ಬದುಕನ್ನು ನಿರ್ಮಿಸಿಕೊಳ್ಳಬಲ್ಲರು ಎಂದು ಸ್ಟೂಡೆಂಟ್ ಎಜ್ಯುಕೇಶನ್ ಸೊಸೈಟಿಯ ಚೇರ್ಮನ್ ಪ್ರೊ. ರಾಜೇಶ ಕುಲಕರ್ಣಿ ಅಭಿಪ್ರಾಯಪಟ್ಟರು.

ಇಲ್ಲಿನ ಸನ್ಮಾರ್ಗ ಪದವಿಪೂರ್ವ ವಿಜ್ಞಾನದ ಕಾಲೇಜಿನಲ್ಲಿ, ಕಾಲೇಜಿನ ಹಳೆಯ ವಿದ್ಯಾರ್ಥಿ ಪ್ರಜ್ವಲ್ ಕೋಡಿಹಳ್ಳಿ ಟೆಕ್ಸಾಸ್ ಇನ್‌ಸ್ಟ್ರುಮೆಂಟ್ ಕಂಪನಿಯ ಕ್ಯಾಂಪಸ್‌ನಲ್ಲಿ ಆಯ್ಕೆಯಾಗಿ ಕಾಲೇಜಿನ ಕೀರ್ತಿ ಹೆಚ್ಚಿಸಿದಕ್ಕೆ ಹಮ್ಮಿಕೊಳ್ಳಲಾದ ಸನ್ಮಾನ ಕಾರ್ಯಕ್ರಮದಲ್ಲಿ ಮಾತನಾಡಿದರು.

ಸಂಸ್ಥೆಯ ನಿರ್ದೇಶಕ ಪ್ರೊ. ಉಡುಪಿ ದೇಶಪಾಂಡೆ ಮಾತನಾಡಿ, ಜೀವನದಲ್ಲಿ ಎದುರಾಗುವ ಸಮಸ್ಯೆಗಳಿಗೆ, ಕಷ್ಟಗಳಿಗೆ ಬಾಗದೆ, ಬಗ್ಗದೆ, ಕುಗ್ಗದೆ ಧೈರ್ಯದಿಂದ ಮುನ್ನುಗ್ಗಿದಾಗ ಬಂದ ಕಷ್ಟಗಳು ತಾವೇ ದೂರವಾಗಿ ಸ್ವಸ್ಥ ಬದುಕಿನ ಕ್ಷಣಗಳನ್ನು ಅನುಭವಿಸುವಂತಾಗುತ್ತದೆ. ಇದಕ್ಕೆ ಪ್ರಜ್ವಲ್ ಕೋಡಿಹಳ್ಳಿ ತಮ್ಮೆಲ್ಲರಿಗೂ ಆದರ್ಶವೆಂದರು.

ಪ್ರಜ್ವಲ್ ಕೋಡಿಹಳ್ಳಿ ಮಾತನಾಡಿ, ನನ್ನ ಸಾಧನೆಗೆ ಸನ್ಮಾರ್ಗ ಕಾಲೇಜಿನ ಸರ್ವ ಗುರುಗಳ ಆಶೀರ್ವಾದ, ಸಹಕಾರ ಕಾರಣವಾಗಿದೆ. ಕೊನೆಯವರೆಗೂ ಈ ಸಂಸ್ಥೆಗೆ ಚಿರಋಣಿಯಾಗಿರುತ್ತೇನೆಂದರು. ಪ್ರಾಚಾರ್ಯ ಪ್ರೊ. ಪ್ರೇಮಾನಂದ ರೋಣದ ಪ್ರಾಸ್ತಾವಿಕವಾಗಿ ಮಾತನಾಡಿದರು. ಸಮಾರಂಭದಲ್ಲಿ ಸಂಸ್ಥೆಯ ನಿರ್ದೇಶಕರಾದ ಪ್ರೊ. ರೋಹಿತ್ ಒಡೆಯರ್, ಪ್ರೊ. ರಾಹುಲ್ ಒಡೆಯರ್, ಪ್ರೊ. ಸೈಯದ್ ಮತೀನ್ ಮುಲ್ಲಾ, ಆಡಳಿತಾಧಿಕಾರಿ ಎಂ.ಸಿ ಹಿರೇಮಠ ಉಪಸ್ಥಿತರಿದ್ದರು.

ಪ್ರೊ. ಸಂತೋಷ ನಾಗರಾಳ ಸ್ವಾಗತಿಸಿದರು. ಪ್ರೊ. ಹೆಚ್.ಎಸ್ ದಳವಾಯಿ ಕಾರ್ಯಕ್ರಮ ನಿರೂಪಿಸಿದರು. ಪ್ರೊ. ವಿಜಯ ಹೆಬಸೂರ ವಂದಿಸಿದರು.

## ಪೋಷಣ್ ಮಾಸಾಚರಣೆ



■ ವಿಜಯಸಾಕ್ಷಿ ಸುದ್ದಿ, ನರಗುಂದ

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಶಿಶು ಅಭಿವೃದ್ಧಿ ಯೋಜನೆ, ನರಗುಂದ ಇವರ ವತಿಯಿಂದ ಪೋಷಣ್ ಮಾಸಾಚರಣೆ ಕಾರ್ಯಕ್ರಮವು ಕುರಗೋವಿನಕೊಪ್ಪ ಗ್ರಾಮದ ಅಂಗನವಾಡಿ ಕೇಂದ್ರ ಸಂಖ್ಯೆ-104ರಲ್ಲಿ ಮಂಗಳವಾರ ಜರುಗಿತು.

ಕಾರ್ಯಕ್ರಮವನ್ನು ಗ್ರಾ.ಪಂ ಸದಸ್ಯ ಜಗದೀಶರೆಡ್ಡಿ ದೊಡ್ಡಲಿಂಗಪ್ಪನವರ ಉದ್ಘಾಟಿಸಿದರು. ಶಿಶು ಅಭಿವೃದ್ಧಿ ಯೋಜನಾಧಿಕಾರಿ ರೂಪಾ ಗಂಧದ ಮಾತನಾಡಿ, ಸರ್ಕಾರದಿಂದ ಅಂಗನವಾಡಿ ಕೇಂದ್ರಗಳ ಮೂಲಕ ವಿವಿಧ ಪೌಷ್ಠಿಕಾಂಶಯುಕ್ತ ಆಹಾರಗಳನ್ನು ನೀಡಲಾಗುತ್ತಿದ್ದು, ಅರ್ಹರು ಇದರ ಸದುಪಯೋಗ ಪಡೆದುಕೊಳ್ಳಿ. ಮನೆಯ ಸುತ್ತ ಮುತ್ತಲಿನ ಆವರಣದಲ್ಲಿ ಪೌಷ್ಠಿಕ ಕೈತೋಟಗಳ ನಿರ್ಮಾಣದಿಂದ ಅಪೌಷ್ಠಿಕತೆ ಹೋಗಲಾಡಿಸಬಹುದಾಗಿದೆ ಎಂದರು.

ಸ್ವ-ಸಹಾಯ ಸಂಘದ ಮಹಿಳೆಯರಿಗೆ ರಂಗೋಲಿ ಸ್ಪರ್ಧೆ ಏರ್ಪಡಿಸಿ, ವಿಜೇತರಿಗೆ ಬಹುಮಾನ ವಿತರಿಸಲಾಯಿತು. ಶಾಲಾ ಪೂರ್ವ ಶಿಕ್ಷಣ ಚಟುವಟಿಕೆಯಲ್ಲಿ ಕ್ರಿಯಾತ್ಮಕವಾಗಿರುವ ಮಕ್ಕಳಿಗೆ ಬಹುಮಾನ ವಿತರಿಸಿ ಪ್ರೋತ್ಸಾಹಿಸಲಾಯಿತು.

ಕಾರ್ಯಕ್ರಮದಲ್ಲಿ ಗ್ರಾ.ಪಂ ಸದಸ್ಯ ಯಮನಪ್ಪ ತಳವಾರ, ಶಿಕ್ಷಕ ಪಿ.ಪಿ ದೇವಾಂಗಮಠ, ಪೋಷಣ್ ಅಭಿಯಾನ ಕಾರ್ಯಕ್ರಮ ಸಂಯೋಜಕ ಮಂಜು ಗುಗ್ಗರಿ, ಆರೋಗ್ಯ ಇಲಾಖೆಯ ನೇತ್ರಾವತಿ ಜಗಲಿ(ಸಿಎಚ್‌ಓ), ಮಂಜುಳಾ ಕುರಬನಾಳ, ಅಂಗನವಾಡಿ ಕಾರ್ಯಕರ್ತೆಯರಾದ ಶಿವಲೀಲಾ ಹಿರೇಮಠ, ಬೇಬಿ ದೊಡ್ಡಮನಿ, ಸಹಾಯಕಿಯರು ಮುಂತಾದವರು ಹಾಜರಿದ್ದರು.

## ತಮಿಳುನಾಡಿಗೆ ಕಾವೇರಿ ನೀರು: ರಾಜ್ಯದ ರೈತ ಸಂಘಟನೆಗಳಿಂದ ಸುಪ್ರೀಂ ಕೋರ್ಟ್‌ಗೆ ಅರ್ಜಿ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕೆಆರ್ ಎಸ್ ಡ್ಯಾಂನಿಂದ ತಮಿಳುನಾಡಿಗೆ ನೀರು ಬಿಡುವಂತೆ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ(ಸಿಡಬ್ಲ್ಯುಎಂಎ) ನೀಡಿರುವ ಆದೇಶ ಪ್ರಶ್ನಿಸಿ ಕರ್ನಾಟಕ ರೈತ ಸಂಘಟನೆಗಳು ಮಂಗಳವಾರ ಸುಪ್ರೀಂ ಕೋರ್ಟ್‌ಗೆ ಅರ್ಜಿ ಸಲ್ಲಿಸಲಿವೆ.

ಈ ಸಂಬಂಧ ಸರ್ವೋದಯ ಕರ್ನಾಟಕ ಪಕ್ಷದ ಶಾಸಕ ದರ್ಶನ್ ಪುಟ್ಟಣ್ಣಯ್ಯ ಅವರು ದೆಹಲಿಗೆ ತೆರಳಿದ್ದು, ಹಿರಿಯ ವಕೀಲ ರವಿವರ್ಮ ಕುಮಾರ್ ಅವರ ಮೂಲಕ ಸುಪ್ರೀಂ ಕೋರ್ಟ್‌ಗೆ ಸಲ್ಲಿಸಿವೆ.



ನಾವು ಬೆಳೆಗೆ ನೀರು ಕೇಳುತ್ತಿಲ್ಲ. ಬದಲಿಗೆ ಕುಡಿಯುವ ನೀರಿಗೆ ಆದ್ಯತೆ ಕೊಡಿ. ತಮಿಳುನಾಡು ಸರ್ಕಾರ ಕುರುವೈ ಬೆಳೆಗೆ ನೀರು ಕೇಳುತ್ತಿದೆ.

ಮಂಡ್ಯ, ಮೈಸೂರು ಸುತ್ತಮುತ್ತ ಮೂರು ದಿನಕ್ಕೊಮ್ಮೆ ನೀರು ಬಿಡಲಾಗುತ್ತಿದೆ. ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರದ (CWMA) ತಂಡ ತಮಿಳುನಾಡಿಗೆ ಭೇಟಿ ನೀಡಿ ಪರಿಶೀಲನೆ ಮಾಡಿದೆ. ಆದರೆ, ಕರ್ನಾಟಕಕ್ಕೆ ಭೇಟಿ ನೀಡಿಲ್ಲ ಎಂದು ರೈತ ಸಂಘಟನೆಗಳು ಅರ್ಜಿಯಲ್ಲಿ ಉಲ್ಲೇಖಿಸಿವೆ.

ಕರ್ನಾಟಕದಲ್ಲಿ ಕಾವೇರಿ ಕಣಿವೆಯ ನೀರಿನ ಬಿಕ್ಕಟ್ಟಿನ ಪರಿಸ್ಥಿತಿಯನ್ನು ನ್ಯಾಯಾಲಯದ ಗಮನಕ್ಕೆ ತರಲಾಗುವುದು ಎಂದು ಮೂಲಗಳು ತಿಳಿಸಿವೆ.

## ರಾಜ್ಯದಲ್ಲಿ ಪ್ರಾಣಿ ದಾಳಿಯಿಂದ ಕಳೆದ 15 ದಿನಗಳಲ್ಲಿ 11 ಜನ ಸಾವು: ಈಶ್ವರ್ ಖಂಡ್ರೆ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ರಾಜ್ಯದಲ್ಲಿ ಇತ್ತೀಚೆಗೆ ಮಾನವ ಮತ್ತು ಪ್ರಾಣಿಗಳ ನಡುವಿನ ಸಂಘರ್ಷ ಹೆಚ್ಚುತ್ತಿದ್ದು, ವನ್ಯ ಪ್ರಾಣಿಗಳ ದಾಳಿಯಿಂದ ಕಳೆದ 15 ದಿನಗಳಲ್ಲಿ 11 ಜನ ಮೃತಪಟ್ಟಿದ್ದಾರೆ. ಈ ವರ್ಷದ ಮೊದಲಾರ್ಧದಲ್ಲಿ 28 ಜನ ಮೃತ ಪಟ್ಟಿದ್ದಾರೆ ಎಂದು ಅರಣ್ಯ ಸಚಿವ ಈಶ್ವರ್ ಖಂಡ್ರೆ ಅವರು ಮಂಗಳವಾರ ಹೇಳಿದ್ದಾರೆ.

ಇಂದು ವಿಧಾನಸೌಧದಲ್ಲಿ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅರಣ್ಯ ಸಚಿವರು, ರಾಜ್ಯದಲ್ಲಿ ಆನೆಗಳ ದಾಳಿಯಿಂದಲೇ ಅಧಿಕ ಸಾವು ಸಂಭವಿಸುತ್ತಿದೆ. ಕಳೆದ ಐದೂವರೆ ವರ್ಷದಲ್ಲಿ 148 ಜನ ಕಾಡಾನೆ ದಾಳಿಯಿಂದ ಮೃತಪಟ್ಟಿದ್ದಾರೆ ಎಂದು ತಿಳಿಸಿದರು.

ಜನವಸತಿ ಪ್ರದೇಶಕ್ಕೆ ಆನೆ ಬರದಂತೆ ತಡೆಯಲು 640 ಕಿಮೀ ರೈಲ್ವೆ ಬ್ಯಾರಿಕೇಡ್ ಹಾಕಬೇಕಿದೆ. ಹೆಚ್ಚುವರಿ 300 ಕಿಮೀ ರೈಲ್ವೆ ಬ್ಯಾರಿಕೇಡ್ ಹಾಕಲು ಮುಖ್ಯಮಂತ್ರಿಗಳಿಗೆ ಮನವಿ ಮಾಡಲಿದ್ದೇನೆ.

1000 ಕಿಮೀ ಸೋಲಾರ್ ತಂತಿ ಅಳವಡಿಸಲಾಗಿದೆ. 7 ಎಲಿಫೆಂಟಾ ಟಾಸ್ಕ್ ಫೋರ್ಸ್‌ಗಳನ್ನು ರಚನೆ ಮಾಡಿದ್ದೇವೆ. ಇದರಲ್ಲಿ 38 ಜನ ನುರಿತವರು ಇರುತ್ತಾರೆ ಎಂದು ಈಶ್ವರ್ ಖಂಡ್ರೆ ಅವರು ಹೇಳಿದ್ದಾರೆ.

## ಗುರುಬಲವಿದ್ದರೆ ಜಗತ್ತನ್ನೇ ಗೆಲ್ಲುವ ಹುಮ್ಮಸ್ಸು



■ ವಿಜಯಸಾಕ್ಷಿ ಸುದ್ದಿ, ಗದಗ

ಗುರುಬಲದಿಂದ ಗುರುತಿಸಲ್ಪಡಬೇಕು. ಆಗ ಮಾತ್ರ ವಿದ್ಯಾರ್ಥಿಗಳ ಜೀವನ ಪಾವನವಾಗುತ್ತದೆ. ಪ್ರತಿ ವಿದ್ಯಾರ್ಥಿಯೂ ತನ್ನ ಜೀವನದಲ್ಲಿ ಏಳಿಗೆ ಪಡೆಯಬೇಕಾದಲ್ಲಿ ಗುರುಗಳ ಬಲ ಮತ್ತು ಆಶೀರ್ವಾದವಿರಲೇಬೇಕು. ಆಗ ಅವರ ಜೀವನ ಉಜ್ವಲವಾಗುತ್ತದೆ ಎಂದು ಪ್ರಾ. ಎಲ್.ಎಸ್ ಪಾಟೀಲ ನುಡಿದರು.

ಅವರು ನಗರದ ಹುಲಕೋಟಿ ಸಹಕಾರಿ ಶಿಕ್ಷಣ ಸಂಸ್ಥೆಯ ಕಲಾ, ವಿಜ್ಞಾನ ಮತ್ತು ವಾಣಿಜ್ಯ ಮಹಾವಿದ್ಯಾಲಯ ಮತ್ತು ಸ್ನಾತಕೋತ್ತರ ಕೇಂದ್ರದಲ್ಲಿ ಶಿಕ್ಷಕರ ದಿನಾಚರಣೆಯ ಅಂಗವಾಗಿ ಏರ್ಪಡಿಸಿದ್ದ ಕಾರ್ಯಕ್ರಮದಲ್ಲಿ ಸರ್ವಪಲ್ಲಿ ರಾಧಾಕೃಷ್ಣನ್‌ರವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಮಾತನಾಡಿದರು.

ಗುರುಬಲವಿದ್ದರೆ ಜಗತ್ತನ್ನೇ ಗೆಲ್ಲುವ ಹುಮ್ಮಸ್ಸು ಬರುತ್ತದೆ. ಅದರಂತೆ ಗುರುವೂ ಸಹ ವಿದ್ಯಾರ್ಥಿಗಳ ಸರ್ವತೋಮುಖ ಏಳಿಗೆಗೆ ಸಹಕಾರ ನೀಡಬೇಕು. ಗುರು ತನ್ನ ಜ್ಞಾನವನ್ನೆಲ್ಲ ಧಾರೆ-ಯೆರೆದು ವಿದ್ಯಾರ್ಥಿಯನ್ನು ಉತ್ತಮ ನಾಗರಿಕನನ್ನಾಗಿ ರೂಪಿಸಿ ರಾಷ್ಟ್ರದ ಪ್ರಗತಿಗೆ ಕಾರಣವಾಗಬೇಕು ಎಂದರು. ಈ ಸಂದರ್ಭದಲ್ಲಿ ಸಿಬ್ಬಂದಿಗಳಾದ ಡಾ. ಎಸ್.ಎಂ ಮಡಿವಾಳರ, ಪ್ರೊ. ಎಸ್.ಜಿ ಉಳಿಗೇರ, ಪ್ರೊ. ಶಶಿಕಾಂತ ಕೊರ್ಲಹಳ್ಳಿ ಪ್ರೊ. ಬಿ.ಸಿ ಜೋಗಿನ, ಪ್ರೊ. ಎಂ.ಡಿ ಮಾದರ, ಪ್ರೊ. ಜಿ.ಎಫ್ ಕಾಯಕದ, ಪ್ರೊ. ಎಂ.ಬಿ ಮಡ್ಡಿ ಉಪಸ್ಥಿತರಿದ್ದರು.

## ಹಾಕಿ ಕ್ರೀಡಾಂಗಣದಲ್ಲಿ ಪಂದ್ಯಾವಳಿ ವೀಕ್ಷಿಸಿದ ಸಚಿವ ಎಚ್.ಕೆ.ಪಾಟೀಲ





■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ನಗರದ ಬೆಟಗೇರಿ ಗಾಂಧಿನಗರದಲ್ಲಿ ನೂತನವಾಗಿ ನಿರ್ಮಿಸಲಾದ ಮಹಾತ್ಮಾಗಾಂಧಿ ಟರ್ಫ್ ಹಾಕಿ ಕ್ರೀಡಾಂಗಣದಲ್ಲಿ ಮಂಗಳವಾರದಂದು ಜರುಗಿದ ಹಾಕಿ ಪಂದ್ಯಾವಳಿಯನ್ನು ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ವೀಕ್ಷಿಸಿದರು.

ಈ ಸಂದರ್ಭದಲ್ಲಿ ಹಿರಿಯ ಹಾಕಿ ಕ್ರೀಡಾಪಟುಗಳು, ರಾಷ್ಟ್ರಮಟ್ಟದ ಹಾಕಿ ಪಂದ್ಯಾವಳಿಯಲ್ಲಿ ಭಾಗಹಿಸಿದ ಕ್ರೀಡಾಪಟುಗಳು, ಅಂತರ ವಿಶ್ವವಿದ್ಯಾಲಯಗಳಲ್ಲಿ ನಾಯಕ ಸ್ಥಾನ ಪಡೆದಂತಹ ಗದಗ ಹಾಕಿ ಕ್ರೀಡಾಪಟುಗಳನ್ನು ಸಚಿವ ಡಾ.ಎಚ್.ಕೆ.ಪಾಟೀಲ ಸನ್ಮಾನಿಸಿದರು.

ಈ ವೇಳೆ ಜಿಲ್ಲಾ ಪಂಚಾಯತ ಮಾಜಿ ಅಧ್ಯಕ್ಷ ವಾಸಣ್ಣ ಕುರಡಗಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್.ನೇಮಗೌಡ, ಯುವಜನ ಸಬಲೀಕರಣ ಹಾಗೂ ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕ ಶರಣು ಗೋಗೇರಿ ಸೇರಿದಂತೆ ಹಿರಿಯ ಹಾಕಿ ಕ್ರೀಡಾಪಟಗಳು, ಹಾಕಿ ಕ್ರೀಡಾ ಪ್ರಿಯರು ಹಾಗೂ ಸಾರ್ವಜನಿಕರು ಹಾಜರಿದ್ದರು.



### ನೀವೂ ನಮ್ಮ ಜೊತೆ ಕೈಜೋಡಿಸಿ

'ವಿಜಯಸಾಕ್ಷಿ'

ನಿಮ್ಮ ಮನೆಯ, ಮನದ ಪತ್ರಿಕೆ ಆಗಲೆಂದು ನಾವು ಬಯಸುತ್ತೇವೆ. ಇಲ್ಲಿ ನಿಮ್ಮ ಅಭಿಪ್ರಾಯ ಹಂಚಿಕೊಳ್ಳಲು ಮುಕ್ತ ಸ್ವಾಗತವಿದೆ.

ನೀವು ಪತ್ರಿಕೆಯ ಕುರಿತು ತಮ್ಮ ಸಲಹೆ, ಮೆಚ್ಚುಗೆ ನಮಗೆ ಬರೆದು ಕಳಿಸಿ..

ಲೇಖನ, ಸಣ್ಣ ಕತೆ, ಕವನ, ಪ್ರಬಂಧ, ಪ್ರವಾಸ ಅನುಭವ ಈ ಕುರಿತು ನೀವೂ ಬರೆಯಬಹುದು.

E-mail: vijayasakshidaily@gmail.com

ಮೊ : 9019256545

# ನಿವೃತ್ತ ಯೋಧನಿಗೆ ಸನ್ಮಾನ



■ವಿಜಯಸಾಕ್ಷಿ ಸುದ್ದಿ, ರೋಣ

ಇತ್ತೀಚೆಗೆ ಸ್ವಯಂ ನಿವೃತ್ತಿ ಹೊಂದಿದ ಸವಡಿ ಗ್ರಾಮದ ಬಿಎಸ್‌ಎಫ್ ಯೋಧ ಅಂದಪ್ಪ ವಿರುಪಾಕ್ಷಪ್ಪ ಅಬ್ಬಿಗೇರಿ ಸ್ವಗ್ರಾಮಕ್ಕೆ ಆಗಮಿಸಿದ ಸಂದರ್ಭದಲ್ಲಿ ಗೆಳೆಯರ ಬಳಗ, ಸವಡಿ ಗ್ರಾಮಸ್ಥರು, ಮಾಜಿ/ಹಾಲಿ ಪ್ಯಾರಾಮಿಲಿಟರಿ ಯೋಧರ ಕಲ್ಯಾಣ ಸಂಘ ಗದಗ, ಭಜನಾ ಸಂಘದವರು, ಶಾಲಾ ಮಕ್ಕಳೊಂದಿಗೆ ಶ್ರೀ ಸಂಗಮೇಶ್ವರ ಪ್ರೌಢಶಾಲೆಯಿಂದ ಊರಿನ ಪ್ರಮುಖ ಬೀದಿಗಳಲ್ಲಿ ಭವ್ಯ ಮೆರವಣಿಗೆಯ ಮುಖಾಂತರ ಸವಡಿ ಗ್ರಾಮದ ಸಾಂಸ್ಕೃತಿಕ ಭವನದಲ್ಲಿ ಸನ್ಮಾನಿಸಲಾಯಿತು.

ಕಾರ್ಯಕ್ರಮದ ಸಾನ್ನಿಧ್ಯವನ್ನು ಶ್ರೀ ಸಂಗನಬಸಯ್ಯ ಹಿರೇಮಠ ವಹಿಸಿದ್ದರು. ಅಧ್ಯಕ್ಷತೆಯನ್ನು ಮಲ್ಲನಗೌಡ್ರ ಪರಡ್ಡಿ, ಮುಖ್ಯ ಅತಿಥಿಗಳಾಗಿ ಅಶೋಕ ಪವಾಡಶೆಟ್ಟಿ, ಆಯ್.ಎಸ್ ಶೀಲವಂತರ, ಶಿದ್ಧಲಿಂಗಪ್ಪ ಹೊನ್ನಾಪೂರ, ಕುಬೇರಪ್ಪ ದೇಸಾಯಿ, ಖಾನಗೌಡ ಚಿಕ್ಕನಗೌಡ್ರ, ಸಿ.ಎಸ್ ಗದಗ, ಗೆಳೆಯರ ಬಳಗದ ಅಧ್ಯಕ್ಷ ಶ್ರೀಶೈಲ ಇಟಗಿ, ಮಹೇಶ ಚಿಕ್ಕನಗೌಡ್ರ, ಈಶ್ವರ ಮಸಗಿ, ಪಾಲಾಕ್ಷಿ ಚಿಕ್ಕನಗೌಡ್ರ, ಬಸಯ್ಯ ಅಗ್ಗಿಮಠ, ಮಲ್ಲಿಕಾರ್ಜುನ ಪೊಲೀಸಪಾಟೀಲ, ಪ್ರಭು ಜಕ್ಕನಗೌಡ್ರ, ಅಂದಪ್ಪ ಗೆದಗೇರಿ, ಸಿದ್ದು ಪೊಲೀಸ್‌ಪಾಟೀಲ, ಕೊಡೇಕಲ್ಲ ಭಜನಾ ಸಂಘದ ಸದಸ್ಯರು ಉಪಸ್ಥಿತರಿದ್ದರು.

ನಿವೃತ್ತ ಯೋಧರ ಬಗ್ಗೆ, ಅವರು ನಡೆದು ಬಂದ ದಾರಿ, ಸೇವೆ ಸಲ್ಲಿಸಿದ ಕುರಿತು ಬಿ.ಎಸ್ ನರೇಗಲ್ ಪ್ರಾಸ್ತಾವಿಕವಾಗಿ ಮಾತನಾಡಿದರು. ಪ್ಯಾರಾಮಿಲಿಟರಿ ಸಂಘದ ಅಧ್ಯಕ್ಷರು, ಸದಸ್ಯರು ಸಭೆಯನ್ನು ಉದ್ದೇಶಿಸಿ ಮಾತನಾಡಿದರು. ನಂತರ ವೀರಯೋಧ ಹಾಗೂ ಅವರ ಕುಟುಂಬವನ್ನು ಸನ್ಮಾನಿಸಲಾಯಿತು. ಬಿ.ಗುಳೇದ ಕಾರ್ಯಕ್ರಮ ನಿರೂಪಿಸಿದರು. ಎಸ್.ಜಿ ಮಣ್ಣೂರ ವಂದಿಸಿದರು.

## ಸ್ತ್ರೀರೋಗ ತಜ್ಞರು, ಫೈನಾನ್ಶಿಯರ್‌ಗಳನ್ನು ಗುರಿಯಾಗಿಸಿಕೊಂಡು ಹಣ ಸುಲಿಗೆಗೆ ಸಂಚು ರೂಪಿಸಿದ್ದ ಗ್ಯಾಂಗ್ ಬಂಧನ

■ವಿಜಯಸಾಕ್ಷಿ ಸುದ್ದಿ, ಕಲಬುರಗಿ:

ಕಲಬುರಗಿಯಲ್ಲಿ ಸ್ತ್ರೀರೋಗ ತಜ್ಞರೊಬ್ಬರ ಕೊಲೆ ಯತ್ನ ಪ್ರಕರಣವನ್ನು ಭೇದಿಸಿರುವ ಪೊಲೀಸರು, ಮಂಗಳವಾರ ಇಬ್ಬರು ಆರೋಪಿಗಳನ್ನು ಬಂಧಿಸಿದ್ದಾರೆ.

ಆರೋಪಿಗಳು ರಾಜ್ಯದ ಸ್ತ್ರೀರೋಗ ತಜ್ಞರು, ಫೈನಾನ್ಶಿಯರ್‌ಗಳನ್ನು ಗುರಿಯಾಗಿಸಿಕೊಂಡು ಅವರಿಂದ ಭಾರಿ ಹಣ ಸುಲಿಗೆಗೆ ಸಂಚು ರೂಪಿಸಿದ್ದರು ಎಂಬುದು ತನಿಖೆಯಿಂದ ತಿಳಿದುಬಂದಿದೆ. ಬಂಧಿತರನ್ನು ಸರ್ಫುದ್ದೀನ್ ಮತ್ತು ಕಮರುದ್ದೀನ್ ಎಂದು ಗುರುತಿಸಲಾಗಿದೆ.

### ಶಿರಹಟ್ಟಿ-ಲಕ್ಷ್ಮೇಶ್ವರ ತಾಲೂಕಾ ಮಟ್ಟದ 'ಶಿಕ್ಷಕರ ದಿನಾಚರಣೆ' ಕಾರ್ಯಕ್ರಮದಲ್ಲಿ ಜ.ಫ.ಸಿದ್ದರಾಮ ಶ್ರೀಗಳು

# ಜ್ಞಾನದಾನದ ಮೂಲಕ ಸಮಾಜವನ್ನು ಸುಶಿಕ್ಷಿತವಾಗಿಸಿ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಗುರು-ಶಿಷ್ಯರ ನಡುವೆ ಶ್ರೇಷ್ಠ ಪರಂಪರೆಯಿದೆ. ಶಿಕ್ಷಕರಿಗೆ ಗುರಿ ಇದ್ದರೆ ಒಳ್ಳೆಯ ದೇಶ ನಿರ್ಮಾಣವಾಗುತ್ತದೆ. ಗುರಿ ಇರದಿದ್ದರೆ ದೇಶ ನಿರ್ನಾಮವಾಗುತ್ತದೆ. ಶಿಕ್ಷಕರು ಮಕ್ಕಳನ್ನು ವಿದ್ಯಾವಂತರನ್ನಾಗಿ ಮಾಡಿ ಒಳ್ಳೆಯ ಸಂಸ್ಕಾರವನ್ನು ಸಹ ನೀಡಬೇಕು. ಅಂದಾಗ ದೇಶ ಅಭಿವೃದ್ಧಿ ಹೊಂದಲು ಸಾಧ್ಯವಾಗುತ್ತದೆ ಎಂದು ಶಿರಹಟ್ಟಿಯ ಶ್ರೀ ಜ.ಫಕೀರೇಶ್ವರ ಸಂಸ್ಥಾನಮಠದ ಜ.ಫ. ಸಿದ್ದರಾಮ ಸ್ವಾಮೀಜಿ ಹೇಳಿದರು.

ಅವರು ಮಂಗಳವಾರ ಶಿರಹಟ್ಟಿಯ ಶ್ರೀ ಜ.ಫಕೀರೇಶ್ವರ ಸಭಾಭವನದಲ್ಲಿ ಜಿಲ್ಲಾ ಪಂಚಾಯತ, ತಾಲೂಕು ಪಂಚಾಯತ ಶಿರಹಟ್ಟಿ ಹಾಗೂ ಲಕ್ಷ್ಮೇಶ್ವರ ಇವರ ಸಂಯುಕ್ತಾಶ್ರಯದಲ್ಲಿ ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಅವರ 135ನೇ ಜನ್ಮದಿನಾಚರಣೆ ಅಂಗವಾಗಿ ತಾಲೂಕಾ ಮಟ್ಟದ 'ಶಿಕ್ಷಕರ ದಿನಾಚರಣೆ' ಹಾಗೂ ನಿವೃತ್ತ ಶಿಕ್ಷಕರಿಗೆ ಸನ್ಮಾನ ಸಮಾರಂಭದ ದಿವ್ಯಸಾನ್ನಿಧ್ಯ ವಹಿಸಿ ಮಾತನಾಡಿದರು.

ಶ್ರೀಮಂತ ದಾನ ಮಾಡಿದರೆ ಅದು ಕಡಿಮೆ ಆಗುತ್ತದೆ. ಶಿಕ್ಷಕ ವಿದ್ಯೆಯನ್ನು ದಾನ ಮಾಡಿದರೆ ಅವರ ದಾನ ಸಂಪತ್ತು ಹೆಚ್ಚಿಗೆ ಆಗುತ್ತದೆ. ತಾಯಿಯೇ ಮೊದಲ ಗುರುವಾಗಿದ್ದಾಳೆ. ಶಾಲೆಯಲ್ಲಿ ಶಿಕ್ಷಕರು ಜ್ಞಾನದಾನ ಮಾಡುವ ಮೂಲಕ ಸಮಾಜವನ್ನು ಸುಶಿಕ್ಷಿತರನ್ನಾಗಿಸಬೇಕೆಂದು ಹೇಳಿದರು.



ಇತ್ತೀಚೆಗೆ ಶಿರಹಟ್ಟಿಯ ಖಾಸಗಿ ಶಾಲೆಯೊಂದರಲ್ಲಿ ರಾಖಿಯನ್ನು ಕತ್ತರಿಸಿ ವಿಕೃತಿ ಮೆರೆದಿರುವುದು ನನ್ನ ಗಮನಕ್ಕೆ ಬಂದಿದೆ. ಸರಕಾರದ ಸುತ್ತೋಲೆಗಳನ್ನು ಧಿಕ್ಕರಿಸುವ ಇಂತಹ ಖಾಸಗಿ ಶಾಲೆಗಳಿಗೆ ಮುಂದಿನ ದಿನಗಳಲ್ಲಿ ಪರವಾನಿಗೆ ನೀಡಬಾರದೆಂದು ಈಗಾಗಲೇ ಬಿಇಓಗೆ ಸೂಚನೆ ನೀಡಿದ್ದೇನೆ. ಯಾವುದೇ ಧರ್ಮಕ್ಕೆ ಅವಮಾನ ಮಾಡಿದರೂ ಅದನ್ನು ನಾನು ಸಹಿಸುವದಿಲ್ಲ. ಶಾಲೆಗಳು ಶೈಕ್ಷಣಿಕ ಪ್ರಗತಿಯ ಸಂಕೇತವಾಗಬೇಕೇ ಹೊರತು ಧರ್ಮ ಘರ್ಷಣೆಯ ಸ್ಥಳವಾಗಬಾರದು. ಎಲ್ಲ ಖಾಸಗಿ ಶಾಲೆಗಳು ಜವಾಬ್ದಾರಿಯನ್ನರಿತು ಶಾಲೆಯನ್ನು ನಡೆಸಬೇಕು. ಇಲ್ಲದೇ ಹೋದಲ್ಲಿ ಅಂತಹ ಶಾಲೆಗಳ ಪರವಾನಿಗೆ ರದ್ದು ಮಾಡಲು ಸರಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗುವುದು.

**– ಡಾ. ಚಂದ್ರು ಲಮಾಣಿ.**

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಶಾಸಕ ಡಾ. ಚಂದ್ರು ಲಮಾಣಿ, ಬಡ ಕುಟುಂಬದಲ್ಲಿ ಬೆಳೆದ ನನಗೆ ಶೈಕ್ಷಣಿಕವಾಗಿ ಪ್ರಗತಿ ಹೊಂದುವುದಕ್ಕೆ ಅನೇಕ ಶಿಕ್ಷಕರು ಜ್ಞಾನದ ಜೊತೆಗೆ ಆರ್ಥಿಕ ಸಹಾಯವನ್ನೂ ಮಾಡಿದ್ದಾರೆ. ಇಂದಿನ ವೇದಿಕೆಯಲ್ಲಿ ಅವರೆಲ್ಲರನ್ನೂ ಸ್ಮರಿಸುತ್ತೇನೆ. ಜಿಲ್ಲೆಯಲ್ಲಿಯೇ ನಮ್ಮ ತಾಲೂಕು ಶಿಕ್ಷಣ ಕ್ಷೇತ್ರದಲ್ಲಿ ಪ್ರಥಮ ಸ್ಥಾನದಲ್ಲಿದೆ. ಅನೇಕ ಶಾಲೆಗಳು ಮೂಲಸೌಲಭ್ಯ ವಂಚಿತವಾಗಿದ್ದು, ಇವೆಲ್ಲವುಗಳಿಗೂ ಆದಷ್ಟು ಬೇಗ ಸೌಲಭ್ಯ ಒದಗಿಸಲಾಗುವುದು. ಶಿಕ್ಷಕರ ಸಮಸ್ಯೆಗಳಿದ್ದಲ್ಲಿ ನೇರವಾಗಿ ಸಂಪರ್ಕಿಸಿ. ಶಾಲೆಗಳಲ್ಲಿ ರಾಜಕೀಯ ಮಾಡಬೇಡಿ, ಮುಂದಿನ ದಿನಗಳಲ್ಲಿ 10ನೇ ತರಗತಿ ವಿದ್ಯಾರ್ಥಿಗಳಿಗೆ ಶಿರಹಟ್ಟಿಯಲ್ಲಿ ಟ್ಯೂಶನ್ ನೀಡಲಾಗುವುದು ಎಂದರು.

ಇದೇ ಸಂದರ್ಭದಲ್ಲಿ ಶಾಸಕ ಡಾ. ಚಂದ್ರು ಲಮಾಣಿ ಶಿರಹಟ್ಟಿ-ಲಕ್ಷ್ಮೇಶ್ವರ ತಾಲೂಕುಗಳ ಎಲ್ಲ ಶಿಕ್ಷಕರಿಗೂ ಶಿಕ್ಷಕರ ದಿನಾಚರಣೆ ನಿಮಿತ್ತ ಬ್ಯಾಗ್ ವಿತರಿಸಿದರು. ನಿವೃತ್ತ ಶಿಕ್ಷಕರನ್ನು ಸನ್ಮಾನಿಸಲಾಯಿತು. ತಾಪಂ ಇಓ ಡಾ. ಎನ್.ಎಚ್ ಓಲೇಕಾರ ಸ್ವಾಗತಿಸಿದರು. ವಿಜಯಲಕ್ಷ್ಮೀ ಮಾಲಸೂರೆ ಮಾಲರ್ಪಣೆ ಮಾಡಿದರು.

ಈಶ್ವರ ಮೆಡ್ಲೇರಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಗಿರೀಶ ಕೊಡಬಾಳ ನಿರೂಪಿಸಿದರು.

ತಹಸೀಲ್ದಾರ ಅನಿಲ ಬಡಿಗೇರ, ಲಕ್ಷ್ಮೇಶ್ವರ ತಾಪಂ ಇಓ ಕೃಷ್ಣಪ್ಪ ಧರ್ಮರ, ಸಿಪಿಐ ನಾಗರಾಜ ಮಾಢಳ್ಳಿ, ಬಿಇಓ ಜಿ.ಎಂ ಮುಂದಿನಮನಿ, ಪಿಎಸ್‌ಐ ಈರಣ್ಣ ರಿತ್ತಿ, ತಾಲೂಕಾ ಸರಕಾರಿ ನೌಕರರ ಸಂಘದ ಅಧ್ಯಕ್ಷ ಶರಣಬಸವ ಪಾಟೀಲ, ಡಿ.ಎಚ್ ಪಾಟೀಲ, ಬಿ.ಎಸ್ ಹರ್ಲಾಪೂರ, ಎಸ್.ಎಫ್ ಮಠದ, ಜಿ.ಡಿ ಈರಕ್ಕನವರ, ಆನಂದ ಮುಳಗುಂದ, ಎಸ್.ಡಿ ಬಿಜ್ಜೂರ, ಎಲ್.ಎಸ್ ಅರಳಿಹಳ್ಳಿ, ಮಂಜುನಾಥ ಕೊಕ್ಕರಗುಂದಿ, ಎಚ್.ಆರ್ ಬೆನಹಾಳ, ಬಸವರಾಜ ಕಳಸಾಪೂರ, ಸಿ.ಸಿ ನೂರಶೆಟ್ಟರ, ಎಚ್.ಎಂ ದೇವಗಿರಿ, ಸಂದೇಶ ಗಾಣಿಗೇರ, ಹಾಲೇಶ ಜಕ್ಕಲಿ, ಜಿ.ಎಂ ಮಾಂಡ್ರೆ, ಬೇವಿನಗಿಡದ ಮುಂತಾದವರು ಉಪಸ್ಥಿತರಿದ್ದರು.

### ಬೀಚಿ ಬಳಗದ ದಶಮಾನೋತ್ಸವ ಕಾರ್ಯಕ್ರಮ ಉದ್ಘಾಟನೆಗೆ ಶಾಸಕ ಜಿ.ಎಸ್ ಪಾಟೀಲರಿಗೆ ಆಹ್ವಾನ

# ನಾಡು ಕಂಡ ಅದ್ಭುತ ಹಾಸ್ಯ ಸಾಹಿತಿ ಬೀಚಿ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಕಳೆದ 10 ವರ್ಷಗಳ ಹಿಂದೆ ಅಸ್ತಿತ್ವಕ್ಕೆ ಬಂದ ಬೀಚಿ ಬಳಗವು ಈಗ ದಶಮಾನೋತ್ಸವದ ಹೊಸ್ತಿಲಲ್ಲಿರುವುದು ಸಂತಸದ ವಿಚಾರ. ದಶಮಾನೋತ್ಸವದ ಸಮಾರಂಭಕ್ಕೆ ನಾನು ಎಲ್ಲ ರೀತಿಯ ಸಹಕಾರ ನೀಡುತ್ತೇನೆ ಎಂದು ರೋಣ ಶಾಸಕ ಜಿ.ಎಸ್ ಪಾಟೀಲ ಹೇಳಿದರು.

ಮಂಗಳವಾರ ರೋಣದ ಶಾಸಕರ ಮನೆಯಲ್ಲಿ ಬೀಚಿ ಬಳಗದ ಪದಾಧಿಕಾರಿಗಳು, ಸದಸ್ಯರು ಬೀಚಿ ಬಳಗದ ದಶಮಾನೋತ್ಸವವನ್ನು ಉದ್ಘಾಟಿಸಲು ಆಮಂತ್ರಿಸಿದ ಸಂದರ್ಭದಲ್ಲಿ ಶಾಸಕರು ಸಂತೋಷದಿಂದ ಒಪ್ಪಿಕೊಂಡು ಮಾತನಾಡಿದರು.

ದಶಮಾನೋತ್ಸವಕ್ಕೆ ಕನ್ನಡದ ಪೂಜಾರಿ ಹಿರೇಮಗಳೂರು ಕಣ್ಣನ್, ಗಂಗಾವತಿ ಬೀಚಿ ಬಿ. ಪ್ರಾಣೇಶ್, ಬಸವರಾಜ ಮಹಾಮನಿ, ನರಸಿಂಹ ಜೋಷಿ, ನಾಗಶ್ರೀ ತ್ಯಾಗರಾಜನ್, ಅನಿಲ ವೈದ್ಯರಂತಹ ಘಟಾನುಘಟಿಗಳು ಆಗಮಿಸುತ್ತಿರುವುದು ಹೆಮ್ಮೆ.

ಬೀಚಿ ಈ ನಾಡು ಕಂಡ ಅತ್ಯಂತ ಅದ್ಭುತ ಹಾಸ್ಯ ಸಾಹಿತಿ. ಹಾಸ್ಯದೊಂದಿಗೆ ಅವರು ನೀಡುತ್ತಿದ್ದ ಸಂದೇಶಗಳನ್ನು ನಾವೆಂದಿಗೂ ಮರೆಯುವಂತಿಲ್ಲ. ಅವರ ಹೆಸರಿನಲ್ಲಿ ನರೇಗಲ್ಲದಲ್ಲಿ ಬೀಚಿ ಬಳಗವನ್ನು ಸ್ಥಾಪಿಸಿ, ಆ ಮೂಲಕ ಸಾಹಿತ್ಯಿಕ ಚಟುವಟಿಕೆಗಳನ್ನು ನಡೆಸುತ್ತಿರುವುದು ಸಂತಸದ ವಿಷಯ. ಎಲ್ಲ ಸಾಹಿತ್ಯಾಸಕ್ತರೂ ಸೇರಿ ಈ ಸಂಘಟನೆಯನ್ನು 10 ವರ್ಷಗಳ ಕಾಲ ಮುನ್ನಡೆಸಿಕೊಂಡು ಬಂದಿರುವುದು ಹೆಮ್ಮೆಯ ಸಂಗತಿ.

**– ಜಿ.ಎಸ್ ಪಾಟೀಲ.** ಶಾಸಕರು, ರೋಣ.

ಕೇವಲ ದೂರದರ್ಶನದಲ್ಲಿ ದೂರದಿಂದಲೇ ಅವರುಗಳ ದರ್ಶನ ಪಡೆಯುತ್ತಿದ್ದ ನಾವು, ಬೀಚಿ ಬಳಗದ ದಶಮಾನೋತ್ಸವದ ನೆನಪಿನಲ್ಲಿ ಅತ್ಯಂತ ಹತ್ತಿರದಿಂದ ಅವರನ್ನು ಕಂಡು, ಅವರ ಮಾತುಗಳನ್ನು ಕೇಳುವ ಸೌಭಾಗ್ಯ ದೊರೆಯುತ್ತಿದೆ. ಸ್ವತಃ ಬೀಚಿಯವರ ಮೊಮ್ಮಗ ಉಲ್ಲಾಸ ಬೀಚಿಯವರೂ ಸಹ ಈ ಕಾರ್ಯಕ್ರಮಕ್ಕೆ ಆಗಮಿಸುತ್ತಿರುವುದು ವಿಶೇಷ. ದಶಮಾನೋತ್ಸವದ ಯಶಸ್ಸಿಗೆ ಎಲ್ಲ ರೀತಿಯ ಸಹಕಾರ ನೀಡುವುದಾಗಿ ಶಾಸಕ ಜಿ.ಎಸ್ ಪಾಟೀಲ ಹೇಳಿದರು.

ಬೀಚಿ ಬಳಗದ ಅಧ್ಯಕ್ಷ, ನಿವೃತ್ತ ಮುಖ್ಯ ಶಿಕ್ಷಕ ಕೆ.ಎಸ್ ಕಳಕಣ್ಣವರ ಶಾಸಕರಿಗೆ ಹೂಮಾಲೆ ಅರ್ಪಿಸಿ, ದಶಮಾನೋತ್ಸವದ ಉದ್ಘಾಟನೆಗೆ ಆಗಮಿಸಲು ವಿನಂತಿಸಿದರು. ನಿವೃತ್ತ ಶಿಕ್ಷಕ, ಬಳಗದ ಹಿಂದಿನ ಅಧ್ಯಕ್ಷ ಎಂ.ಎಸ್ ದಢೇಸೂರಮಠ ಶಾಸಕರಿಗೆ ದಶಮಾನೋತ್ಸವದ ಆಚರಣೆಯ ಎಲ್ಲ ಸಿದ್ಧತೆಗಳ ಕುರಿತು ವಿವರಿಸಿದರು.

ಈ ಸಂದರ್ಭದಲ್ಲಿ ಬಳಗದ ಸಂಚಾಲಕ ಈಶ್ವರ ಬೆಟಗೇರಿ, ಕೋಶಾಧ್ಯಕ್ಷ ಶಿವಯೋಗಿ ಜಕ್ಕಲಿ, ಸದಸ್ಯರಾದ ಬಿ.ಬಿ ಕುರಿ, ನಿಂಗಪ್ಪ ಲಕ್ಕನಗೌಡ್ರ, ಅರುಣ ಕುಲಕರ್ಣಿ ಮುಂತಾದವರಿದ್ದರು.

# ಮೈಸೂರಿನಲ್ಲಿ 5ನೇ ಸಾಂಸ್ಕೃತಿಕ ಸಮ್ಮೇಳನ ಸೆ.10ಕ್ಕೆ

■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಕುಕನೂರಿನ ಕನ್ನಡ ಸಾಹಿತ್ಯ ಅಭಿವೃದ್ಧಿ ಟ್ರಸ್ಟ್ ಹಾಗೂ ಮೈಸೂರಿನ ಚಿತ್ಕಲಾ ಸಾಂಸ್ಕೃತಿಕ ಪ್ರತಿಷ್ಠಾನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ಅಖಿಲ ಕರ್ನಾಟಕ 5ನೇ ಸಾಂಸ್ಕೃತಿಕ ಸಮ್ಮೇಳನ ಹಾಗೂ ಸಾಹಿತ್ಯೋತ್ಸವ-2023 ಕಾರ್ಯಕ್ರಮ ಸೆಪ್ಟೆಂಬರ್ 10ರಂದು ಮೈಸೂರಿನ ಹೋಟೆಲ್ ಮಾಲೀಕರ ಸಂಘದ ಕುತ್ತೇತ್ತೂರು ಸೀತಾಮರಾವ್ ಭವನದಲ್ಲಿ ನಡೆಯಲಿದೆ.



ನಿವೃತ್ತ ಪೊಲೀಸ್ ಅಧಿಕಾರಿ ಹಾಗೂ ಹಿರಿಯ ಸಾಹಿತಿ ಡಾ. ಕೆ.ಮಹಾದೇವ ನಾಯಕ್ ಅವರ ಸರ್ವಾಧ್ಯಕ್ಷತೆಯಲ್ಲಿ ಕಾರ್ಯಕ್ರಮಗಳು ನಡೆಯಲಿವೆ. ಸೆ.10ರ ಭಾನುವಾರ ಬೆಳಿಗ್ಗೆ 9.30ಕ್ಕೆ ನಾಡಗೀತೆ ಹಾಗೂ ಪ್ರಾರ್ಥನೆಯೊಂದಿಗೆ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಗುವುದು. ನಾಡಿನ ಹೆಸರಾಂತ ಕಲಾವಿದರಿಂದ ನೃತ್ಯ, ಜಾನಪದ ಗೀತೆ, ಹಾಗೂ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ. ನಾಡಿನ ವಿವಿಧ ಜಿಲ್ಲೆಯ ಹೆಸರಾಂತ ಕವಿಗಳು ಕವಿಗೋಷ್ಠಿಯಲ್ಲಿ ಭಾಗವಹಿಸಲಿದ್ದಾರೆ. ಇದೇ ಸಂದರ್ಭದಲ್ಲಿ ನಾಡಿನ ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸೇವೆ ಸಲ್ಲಿಸಿದ 30ಕ್ಕೂ ಹೆಚ್ಚು ಸಾಧಕ ಮಹನೀಯರನ್ನು ಸನ್ಮಾನಿಸಿ ರಾಷ್ಟ್ರೀಯ ಚೇತನ ರಾಷ್ಟ್ರ ಪ್ರಶಸ್ತಿ ಹಾಗೂ ಕರ್ನಾಟಕ ಚೇತನ ರಾಜ್ಯ ಪ್ರಶಸ್ತಿ ಪ್ರದಾನ ಮಾಡಲಾಗುವುದು ಎಂದು ಮೈಸೂರಿನ ಚಿತ್ಕಲಾ ಸಾಂಸ್ಕೃತಿಕ ಪ್ರತಿಷ್ಠಾನದ ಸಂಸ್ಥಾಪಕರಾದ ರೂಪದರ್ಶಿನಿ ಕೆ.ಬಿ ಅವರು ಪತ್ರಿಕಾ ಪ್ರಕಟನೆಯಲ್ಲಿ ತಿಳಿಸಿದ್ದಾರೆ.

ಮುಂಡರಗಿ ಪಟ್ಟಣದ ಕೋಟೆ ಭಾಗದ ಶ್ರೀದುರ್ಗಾದೇವಿ ದೇವಸ್ಥಾನ ಕಮಿಟಿ ವತಿಯಿಂದ ಶ್ರಾವಣ ಮಾಸದ ಕೊನೆಯ ಮಂಗಳವಾರದ ನಿಮಿತ್ತ ತುಂಗಭದ್ರ ನದಿ ದಡದಲ್ಲಿ ದುರ್ಗಾದೇವಿಗೆ ವಿಶೇಷ ಪೂಜೆ ಸಲ್ಲಿಸಿದರು. ಈ ಭಾಗದ ಅಪಾರ ಭಕ್ತರು ಭಜನೆ, ಡೊಳ್ಳು, ಎತ್ತಿನಬಂಡಿಗಳೊಂದಿಗೆ ಬುತ್ತಿ ಕಟ್ಟಿಕೊಂಡು ಸಂಭ್ರಮದಿಂದ ನಗರದ ಪ್ರಮುಖ ಬೀದಿಗಳಲ್ಲಿ ಪಲ್ಲಕ್ಕಿ ಮೆರವಣಿಗೆಯೊಂದಿಗೆ ನದಿ ತೀರದವರೆಗೆ ಸಾಗಿ, ಪೂಜೆ ನೆರವೇರಿಸಿದರು.



### ದಸರಾ ಗಜಪಡೆಗೆ ಪುಷ್ಪಾರ್ಚನೆ ಸಲ್ಲಿಸಿ ಸ್ವಾಗತಿಸಿದ ಸಚಿವ ಡಾ.ಹೆಚ್.ಸಿ.ಮಹದೇವಪ್ಪ

# ಮೈಸೂರಿನ ಪರಂಪರೆ, ವಿಜಯನಗರ ವೈಭವ ಪ್ರತಿಬಿಂಬಿಸುವಂತೆ ಆಚರಿಸಿ

■ವಿಜಯಸಾಕ್ಷಿ ಸುದ್ದಿ, ಮೈಸೂರು

ವಿಶ್ವ ವಿಖ್ಯಾತ ನಾಡಹಬ್ಬ ಮೈಸೂರು ದಸರಾ ಮಹೋತ್ಸವದ ಪ್ರಮುಖ ಆಕರ್ಷಣೆಯಾದ ಗಜಪಡೆಗೆ ಸಮಾಜ ಕಲ್ಯಾಣ ಹಾಗೂ ಮೈಸೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಹೆಚ್.ಸಿ.ಮಹದೇವಪ್ಪ ಸಾಂಪ್ರದಾಯಿಕವಾಗಿ ಪೂಜೆ ಸಲ್ಲಿಸಿ ಸ್ವಾಗತಿಸಿದರು.

ಜಿಲ್ಲಾಡಳಿತ ಮತ್ತು ಅರಮನೆ ಮಂಡಳಿ ವತಿಯಿಂದ ಮಂಗಳವಾರ ಅರಮನೆಯ ಜಯಮಾರ್ತಾಂಡ ದ್ವಾರದಲ್ಲಿ ಮಧ್ಯಾಹ್ನ 12.01 ರಿಂದ 12.51 ಗಂಟೆಯ ಅಭಿಜಿತ್ ಲಗ್ನದಲ್ಲಿ ಅಂಬಾರಿ ಆನೆ ಅಭಿಮನ್ಯು ನೇತೃತ್ವದ ವಿಜಯ, ವರಲಕ್ಷ್ಮಿ, ಧನಂಜಯ, ಮಹೇಂದ್ರ, ಭೀಮ, ಗೋಪಿ, ಕಂಜನ್ ಒಳಗೊಂಡ ಗಜಪಡೆಗೆ ಪಾದಪೂಜೆ, ದ್ವಾರಪಾಲಕ ಪೂಜೆ, ಚಾಮರಸೇವೆ ಮಾಡಿ ಪುಷ್ಪಾರ್ಚನೆ ಅರ್ಪಿಸಲಾಯಿತು.

ಜಾನಪದ ಕಲಾತಂಡಗಳ ನೃತ್ಯ, ಪೂರ್ಣಕುಂಭ ಸ್ವಾಗತ ಮತ್ತು ಮಂಗಳ ವಾದ್ಯ, ಪೊಲೀಸ್ ಬ್ಯಾಂಡ್ ನಿನಾದದೊಂದಿಗೆ ಜಯಮಾರ್ತಾಂಡ ದ್ವಾರದಿಂದ ಅರಮನೆಯ ಅಂಗಳಕ್ಕೆ ಬರಮಾಡಿಕೊಳ್ಳಲಾಯಿತು. ಅಭಿಮನ್ಯು ನೇತೃತ್ವದ ಗಜಪಡೆಯು ರಾಜಗಾಂಭೀರ್ಯದಿಂದ ಹೆಜ್ಜೆ ಹಾಕಿದವು.







ಅರಮನೆ ಮುಂಬಾಗ ಸಚಿವರಾದ ಹೆಚ್.ಸಿ.ಮಹದೇವಪ್ಪ ಅವರು ಪುಷ್ಪಾರ್ಚನೆ ಮಾಡಿದರು. ನಂತರ ಗಜಪಡೆಯ ಕಾವಾಡಿಗರು ಮತ್ತು ಮಾವುತರಿಗೆ ಮೂಲಭೂತ ಸಾಮಾಗ್ರಿಗಳನ್ನು ವಿತರಿಸಿದರು. ದಸರಾವನ್ನು ಅತ್ಯುತ್ತಮವಾಗಿ ನಡೆಸಿಕೊಡುವಂತೆ ದಸರಾ ವಿಶೇಷ ಕರ್ತವ್ಯ ಅಧಿಕಾರಿಗಳಿಗೂ ಕೂಡ ಸಚಿವರು ತಾಂಬೂಲ ನೀಡಿದರು.

ಈ ವೇಳೆ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು, ನಾಡಹಬ್ಬ ಮೈಸೂರು ದಸರಾವನ್ನು ಮೈಸೂರಿನ ಪರಂಪರೆ ಮತ್ತು ವಿಜಯನಗರದ ವೈಭವವನ್ನು ಪ್ರತಿಬಿಂಬಿಸುವಂತೆ ಅತ್ಯಂತ ಶಿಸ್ತುಬದ್ಧವಾಗಿ ಮತ್ತು ಅರ್ಥಪೂರ್ಣವಾಗಿ ಆಚರಿಸಲಾಗುವುದು. ಈ ಹಿನ್ನೆಲೆ ಜಿಲ್ಲಾಡಳಿತ, ಅರಮನೆ ಮಂಡಳಿ ಹಾಗೂ ಜಿಲ್ಲೆಯ ಪೊಲೀಸ್ ಇಲಾಖೆಗೆ ವಿಶೇಷ ಜವಾಬ್ದಾರಿ ನೀಡಲಾಗಿದೆ ಎಂದು ತಿಳಿಸಿದರು.

ಜಿಲ್ಲೆಯಲ್ಲಿ ಮಾನವ ಮತ್ತು ಪ್ರಾಣಿ ಸಂಘರ್ಷ ನಡೆಯುತ್ತಿರುವುದು ಗಮನದಲ್ಲಿದೆ. ಈ ಸಂಬಂಧ ಅರಣ್ಯ ಸಚಿವರೊಂದಿಗೆ ಚರ್ಚಿಸಲಾಗಿದೆ. ಸಂಘರ್ಷ ತಡೆಯಲು ಈಗಾಗಲೇ ಟಾಸ್ಕ್ ಫೋರ್ಸ್ ರಚಿಸಲಾಗಿದೆ. ಎಚ್.ಡಿ.ಕೋಟೆಯಲ್ಲಿ ಮಗುವಿನ ಮೇಲೆ ದಾಳಿ ಮಾಡಿರುವ ಹುಲಿಯನ್ನು ಹಿಡಿಯಲು ಸರ್ಕಾರ ಸೂಚನೆ ನೀಡಿದೆ. ಕಾಡಂಚಿನ ಜನರ ರಕ್ಷಣೆಗೆ ಹಾಗೂ ಅಭಿವೃದ್ಧಿಗೆ ಸರ್ಕಾರ ಬದ್ಧವಾಗಿದೆ.

**–ಎಚ್.ಸಿ. ಮಹಾದೇವಪ್ಪ.** ಸಚಿವರು.

ಪ್ರತಿನಿತ್ಯ ಪೊಲೀಸ್ ಬಂದೋಬಸ್ತ್‌ನಲ್ಲಿ ಗಜಪಡೆಗೆ ತಾಲೀಮು ನಡೆಯಲಿದೆ. ದಸರಾ ಮಹೋತ್ಸವದಲ್ಲಿ ಭಾಗವಹಿಸುವ ಆನೆಗಳ ಮಾವುತರು ಹಾಗೂ ಕಾವಾಡಿಗಳು ಅವರ ಕುಟುಂಬಗಳ ವಾಸ್ತವ್ಯಕ್ಕೆ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿದೆ. ಈ ಹಿನ್ನೆಲೆ ಅರಮನೆ ಅಂಗಳದಲ್ಲಿ 30ಕ್ಕೂ ಹೆಚ್ಚು ಸುಸಜ್ಜಿತ ಶೆಡ್ ನಿರ್ಮಾಣ ಮಾಡಲಾಗಿದೆ. ಅವರಿಗೆ ವಿಶೇಷ ಭೋಜನದ ವ್ಯವಸ್ಥೆ ಮಾಡಲಾಗಿದೆ ಎಂದರು.

ಆನೆಗಳ ಜೊತೆ ಸರಿಸುಮಾರು ಎರಡು ತಿಂಗಳ ಕಾಲ ಅರಮನೆ ಆವರಣದಲ್ಲಿ ವಾಸವಿರುವ ಮಾವುತರು ಮತ್ತು ಕಾವಾಡಿಗರ ಕುಟುಂಬಕ್ಕೆ ಮೂಲ ಸೌಲಭ್ಯದ ಜೊತೆಗೆ ಅವರ ಮಕ್ಕಳಿಗೆ ತಾತ್ಕಾಲಿಕವಾಗಿ ಶಾಲೆ ಆರಂಭಿಸಲಾಗುವುದು. ಈ ಅವಧಿಯಲ್ಲಿ ಶಿಕ್ಷಕರನ್ನು ನೇಮಿಸಿ ಮಕ್ಕಳಿಗೆ ವಿದ್ಯಾಭ್ಯಾಸ ನೀಡಲಾಗುತ್ತದೆ ಎಂದು ತಿಳಿಸಿದರು.

ದಸರಾ ಸಂಬಂಧ ನಗರದಲ್ಲಿ ಕಾಮಗಾರಿ ಕೈಗೊಳ್ಳಲು ಈಗಾಗಲೇ ಮುಖ್ಯಮಂತ್ರಿಗಳು ಅಗತ್ಯ ಅನುದಾನವನ್ನು ಬಿಡುಗಡೆಗೊಳಿಸುವಂತೆ ಆರ್ಥಿಕ ಇಲಾಖೆ ಸೂಚನೆ ನೀಡಿದ್ದಾರೆ. ಕಳೆದ ಬಾರಿ ನಾನು ಲೋಕೋಪಯೋಗಿ ಸಚಿವನಾದ್ದಾಗಲೇ ಮೈಸೂರಿನಲ್ಲಿ ಅನೇಕ ಗುಣಾತ್ಮಕ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲಾಗಿದೆ. ಅದರಂತೆ ದಸರಾಗೆ ಅಗತ್ಯವಿರುವ ಕಾಮಗಾರಿ ಕೈಗೊಳ್ಳಲಾಗುವುದು ಎಂದು ಮಾಹಿತಿ ನೀಡಿದರು.

ಜಿಲ್ಲೆಯಲ್ಲಿ ಬರಪೀಡಿತ ತಾಲೂಕುಗಳನ್ನು ಮಾನದಂಡಗಳ ಮುಖೇನ ಸಂಬಂಧಿಸಿದ ಅಧಿಕಾರಿಗಳೊಂದಿಗೆ ಚರ್ಚಿಸಲಾಗುವುದು. ಸದ್ಯದಲ್ಲಿ ಎಚ್.ಡಿ.ಕೋಟೆ ಮತ್ತು ತಿ.ನರಸೀಪುರ ಬರಪೀಡಿತ ತಾಲೂಕು ಎಂಬ ವರದಿ ಇದೆ. ಮಳೆ ಪ್ರಮಾಣದ ಆಧಾರವನ್ನು ಗಮನದಲ್ಲಿರಿ ಸಚಿವ ಸಂಪುಟ ಸಭೆಯಲ್ಲಿ ಎಲ್ಲವನ್ನೂ ಕೂಲಂಕಷವಾಗಿ ಚರ್ಚೆ ಮಾಡಲಾಗುವುದು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಮೇಯರ್ ಶಿವಕುಮಾರ್, ಶಾಸಕರಾದ ಕೆ.ಹರೀಶ್ ಗೌಡ, ಶ್ರೀವತ್ಸ, ವಿಧಾನ ಪರಿಷತ್ ಸದಸ್ಯ ಸಿ.ಎನ್.ಮಂಜೇಗೌಡ, ಸಂಸದ ಪತಾಪ ಸಿಂಹ, ಜಿಲ್ಲಾಧಿಕಾರಿ ಡಾ.ಕೆ.ವಿ.ರಾಜೇಂದ್ರ, ಜಿಲ್ಲಾ ಪಂಚಾಯತ್ ಸಿಇಓ ಕೆ.ಎಂ. ಗಾಯಿತ್ರಿ, ನಗರ ಪೊಲೀಸ್ ಆಯುಕ್ತ ರಮೇಶ್ ಬಾನೂತ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸೀಮಾ ಲಾಟ್ಕರ್, ಅರಣ್ಯ ಸಂರಕ್ಷಣಾಧಿಕಾರಿ ಮಾಲತಿ ಪ್ರಿಯಾ, ಉಪ ಅರಣ್ಯ ಸಂರಕ್ಷಣಾಧಿಕಾರಿ ಸೌರಭ್ ಕುಮಾರ್, ಅರಮನೆ ಮಂಡಳಿ ಉಪನಿರ್ದೇಶಕ ಸುಬ್ರಹ್ಮಣ್ಯ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka